# ಕಬ್ಬು ಬೆಳೆಗಾರರ ದಿಕ್ಕು ತಪ್ಪಿಸೋ ಕ್ರಮ: ಸಿಎಂಗೆ ಸಚಿವ ಪ್ರಲ್ಹಾದ ಜೋಶಿ ಪತ್ರ



**ನವದೆಹಲಿ, ನ.8**–ಕರ್ನಾಟಕದ ಕಬ್ಬು ಬೆಳೆಗಾರರ ಸಮಸ್ಯೆ ಬಗ್ಗೆ ರಾಜ್ಯ ಸರ್ಕಾರ ಕೇಂದ್ರ ಸರ್ಕಾರದತ್ತ ಬೆರಳು ತೋರುವುದು ಸರಿಯಲ್ಲ. ಇದು ರೈತರನ್ನು ದಿಕ್ಕು ತಪ್ಪಿಸುವ ಅನ್ಯಾಯದ ಕ್ರಮವೆಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದು ಆಕ್ಷೇಪಿಸಿದ್ದಾರೆ. ರಾಜ್ಯದ ವಿವಿಧೆಡೆ ಕಬ್ಬು ಬೆಳೆಗಾರರ ಹೋರಾಟ ತೀವ್ರ ಸ್ವರೂಪ ಪಡೆಯುತ್ತಿದ್ದಂತೆ ಮುಖ್ಯಮಂತ್ರಿಗಳು ಕೇಂದ್ರದತ್ತ ಬೆರಳು ತೋರಿ, ಕಬ್ಬು ಬೆಳೆಗಾರರ ಹಿತರಕ್ಷಣೆಯಿಂದ ನುಣುಚಿಕೊಳ್ಳುವುದು ತರವಲ್ಲ. ಪ್ರಧಾನಿ ನರೇಂದ್ರ ಮೋದಿ ಅವರ ಸರ್ಕಾರ ಸದಾ ರೈತರ ಕಲ್ಯಾಣಕ್ಕೆ ಬದ್ಧವಾಗಿದ್ದು, ಕಬ್ಬು ಬೆಳೆಗಾರರು ಮತ್ತು ಸಕ್ಕರೆ ಕಾರ್ಖಾನೆಗಳ ಹಿತರಕ್ಷಣೆಗೆ ಹಿಂದೆಂದಿಗಿಂತಲೂ ಒಳ್ಳೆಯ ಕ್ರಮಗಳನ್ನೆ ಕೈಗೊಂಡಿದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

ಕೇಂದ್ರ ಸರ್ಕಾರ ಬೆಳೆಗಾರರ ಸಂಕಷ್ಟ ಪರಿಸ್ಥಿತಿ ಅರಿತು ಈಗ ಕಬ್ಬು ಬಾಕಿಯನ್ನು ಶೂನ್ಯಕ್ಕೆ ತಂದಿದೆ. 2024–25ಕ್ಕೆ ಸುಮಾರು 50 ಲಕ್ಷ ರೂ.ಬಾಕಿ ಇದೆ. 2014–15ರಿಂದ 2020–21ರ ಅವಧಿಯಲ್ಲಿ ವಿವಿಧ ಯೋಜನೆಗಳಡಿ ರೈತರ ಕಬ್ಬಿನ ಬಾಕಿ ಪಾವತಿಸಲು ಅನುವಾಗುವಂತೆ ಸಕ್ಕರೆ ಕಾರ್ಖಾನೆಗಳಿಗೆ ಸುಮಾರು 16,500 ಕೋಟಿ ರೂ. ಆರ್ಥಿಕ ನೆರವನ್ನು ಒದಗಿಸಿದೆ ಎಂದು ಗಮನ ಸೆಳೆದಿದ್ದಾರೆ.

ಕಬ್ಬು ಬೆಳೆಯುವ ಎಲ್ಲಾ ರಾಜ್ಯಗಳಿಗೂ ಅನ್ವಯಿಸಿ 2025–26ರಲ್ಲಿ ಉತ್ಪಾದನಾ ವೆಚ್ಚ ಒಳಗೊಂಡಂತೆ ಎಫ್‌ಆರ್‌ಪಿಯನ್ನು ಅನುಮೋದಿಸಿದೆ. ಎಫ್‌ಆರ್‌ಪಿ ದರದಲ್ಲಿ ಕಳೆದ ದಶಕದಿಂದ ಗಮನಾರ್ಹ ಏರಿಕೆ ಕಂಡುಬಂದಿದೆ. 2013–14ರಿಂದ 2024–25ರ ಅವಧಿಯಲ್ಲಿ ಕಬ್ಬು ಖರೀದಿ ಮೌಲ್ಯ ಶೇ.80ರಷ್ಟು ಹೆಚ್ಚಾಗಿದೆ. ಕೇಂದ್ರ ಸರ್ಕಾರ ನಿಗದಿಪಡಿಸಿದ ದರದಂತೆ ಸಕ್ಕರೆ ಕಾರ್ಖಾನೆಗಳು 14 ದಿನಗಳಲ್ಲಿ ರೈತರಿಗೆ ಸಕಾಲಿಕವಾಗಿ ಕಬ್ಬಿನ ವೆಚ್ಚ ಪಾವತಿಸುವುದು ಕಡ್ಡಾಯವಾಗಿದೆ. ಈ ನಿಟ್ಟಿನಲ್ಲಿ 1966ರ ಕಬ್ಬು ನಿಯಂತ್ರಣ (ಆದೇಶ) ನಿಬಂಧನೆ ಜಾರಿಗೊಳಿಸುವ ಅಧಿಕಾರವನ್ನು ರಾಜ್ಯ ಸರ್ಕಾರಗಳಿಗೆ ವಹಿಸಲಾಗಿದೆ ಎಂದಿದ್ದಾರೆ.

ರಾಜ್ಯದ ಕಬ್ಬು ಬೆಳೆಗಾರರ ಹಿತರಕ್ಷಣೆಗಾಗಿ ರಾಜ್ಯ ಸರ್ಕಾರ ರಾಜ್ಯ ಸಲಹಾ ಬೆಲೆ ಘೋಷಿಸಲಿ ಎಂದು ಸಲಹೆ ಮಾಡಿರುವ ಅವರು, ಹೆಚ್ಚುವರಿ ಕಬ್ಬನ್ನು ಎಥೆನಾಲ್‌ಗೆ ಬಳಸಿಕೊಳ್ಳಲು ಕೇಂದ್ರ ಸರ್ಕಾರ ಸಕ್ಕರೆ ಕಾರ್ಖಾನೆಗಳನ್ನು ಪ್ರೋತ್ಸಾಹಿಸುತ್ತಿದೆ. ಕರ್ನಾಟಕದಲ್ಲಿ ಎಥೆನಾಲ್ ಡಿಸ್ಟಿಲರಿಗಳನ್ನು ಸ್ಥಾಪಿಸಲು ಕೇಂದ್ರ ಸರ್ಕಾರ ಎಥೆನಾಲ್ ಬಡ್ಡಿ ಸಬ್ವೆನ್ಷನ್ ಯೋಜನೆಯಡಿ 435.42 ಕೋಟಿ ರೂ. ಆರ್ಥಿಕ ನೆರವು ನೀಡಿದೆ ಎಂದು ಅಂಕಿ–ಅಂಶಗಳ ಸಹಿತ ಮಾಹಿತಿ ನೀಡಿದ್ದಾರೆ.

ಸಕ್ಕರೆ ರಫ್ತಿಗೆ ಅವಕಾಶ:10 ಲಕ್ಷ ಮೆಟ್ರಿಕ್ ಟನ್‌ನಿಂದ 15 ಲಕ್ಷ ಮೆಟ್ರಿಕ್ ಟನ್ ಸಕ್ಕರೆ ರಫ್ತಿಗೆ ಅವಕಾಶ ನೀಡಲು ನಿರ್ಧರಿಸಿದೆ. ಮೊಲಾಸಸ್ ಮೇಲಿನ ಶೇ.50ರಷ್ಟು ರಫ್ತು ಸುಂಕವನ್ನು ತೆಗೆದುಹಾಕಿದೆ. ಹೀಗೆ ಕೇಂದ್ರ ಸರ್ಕಾರ ರೈತರು ಮತ್ತು ಸಕ್ಕರೆ ಉದ್ಯಮ ಎರಡನ್ನೂ ಬೆಂಬಲಿಸುವ ನಿಟ್ಟಿನಲ್ಲಿ ಸಮತೋಲಿತವಾಗಿ ಸ್ಪಂದಿಸುತ್ತಿದೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

# ಆಯೋಗ ದಾಖಲೆ ನೀಡಿದರೆ ಪ್ರಮಾಣ ಪತ್ರ ಸಲ್ಲಿಸಲು ಸಿದ್ಧ : ಡಿ.ಕೆ.ಶಿವಕುಮಾರ್



**ಬೆಂಗಳೂರು, ನ.8**– ಮತಗಳ್ಳತನ ಪ್ರಕರಣದಲ್ಲಿ ಚುನಾವಣಾ ಆಯೋಗ ನಾವು ಕೇಳಿದ ಎಲ್ಲಾ ಮಾಹಿತಿಗಳನ್ನು ಮೊದಲು ನೀಡಲಿ ನಂತರ ಆಯೋಗ ಕೇಳುವ ಪ್ರಮಾಣ ಪತ್ರವನ್ನು ಸಲ್ಲಿಸುತ್ತೇವೆ ಎಂದು ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸವಾಲು ಹಾಕಿದ್ದಾರೆ. ಪಕ್ಷದ ಕಚೇರಿಯಲ್ಲಿಂದು ಮತಗಳ್ಳತನದ ವಿರುದ್ಧ ನಡೆಯುತ್ತಿರುವ ಸಹಿ ಸಂಗ್ರಹ ಅಭಿಯಾನ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 300 ಮಂದಿ ಸಂಸದರು ದೆಹಲಿಗೆ ಹೋಗಿ ಸಮಯ ಕೇಳಿದ್ದಾರೆ, ಆಯೋಗ ಸ್ಪಂದಿಸುತ್ತಿಲ್ಲ. ನಾವು ಹಗರಣವನ್ನು ಹೊರ ತಂದ ಬಳಿಕ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಮಾಡಲು ಆಯೋಗ ಮುಂದಾಗಿದೆ ಎಂದು ಲೇವಡಿ ಮಾಡಿದರು.

ಮತಗಳ್ಳತನದ ಮಾಹಿತಿಯನ್ನು ಪೂರ್ಣವಾಗಿ ನಾವು ಬಹಿರಂಗ ಪಡಿಸಿದರೆ ಅಲ್ಲೋಲ್ಲಕಲ್ಲೋಲವಾಗಲಿದೆ. ಬಿಜೆಪಿ ಅಧಿಕಾರದಲ್ಲಿದ್ದರೆ ಮತಗಳ್ಳತನವನ್ನು ಮುಚ್ಚಿ ಹಾಕುತ್ತಾರೆ, ಅದಕ್ಕಾಗಿ ಅವರು ರಾಜೀನಾಮೆ ಕೊಟ್ಟು ಚುನಾವಣೆ ಬರಲಿ ಎಂದು ಸವಾಲು ಹಾಕಿದರು. ಚುನಾವಣೆಯಲ್ಲಿ ನಾನು ಮತ್ತು ತಮ ಪತ್ನಿ ಮತದಾನ ಮಾಡಿ ಜೊತೆಯಾಗಿ ನಿಂತು ಪೋಟೋ ತೆಗೆಸಿಕೊಂಡಿದ್ದಕ್ಕೆ ಮತದಾರರ ಪಟ್ಟಿಯಿಂದಲೇ ನನ್ನ ಹೆಸರನ್ನು ಡಿಲಿಟ್ ಮಾಡಲಾಗಿತ್ತು. ಅಂತಹ ಆಯೋಗ ಈಗ ಮತಗಳ್ಳತನವನ್ನು ತನಿಖೆ ಮಾಡುತ್ತಿಲ್ಲ, ಕೊನೆಗೆ ಕಾಂಗ್ರೆಸ್ ಪಕ್ಷವೇ ತನಿಖೆ ಮಾಡುತ್ತಿದೆ ಎಂದರು ಹೇಳಿದರು.

ಮತಗಳ್ಳತನದ ಭಾಗವಾಗಿ ಒಂದು ಮತವನ್ನು ಪಟ್ಟಿಯಿಂದ ಕಿತ್ತು ಹಾಕಿದರೆ 80 ರೂಪಾಯಿ ನೀಡಲಾಗುತ್ತಿತ್ತು ಎಂಬುದು ತನಿಖೆಯಲ್ಲಿ ತಿಳಿದು ಬಂದಿದೆ. ಮಹದೇವಪುರ ಕ್ಷೇತ್ರದಲ್ಲಿ 1.30 ಲಕ್ಷ ಮತಗಳ ಕಳ್ಳತನವಾಗಿರುವುದನ್ನು ಪತ್ತೆ ಹಚ್ಚಲಾಗಿತ್ತು. ಬೆಂಗಳೂರಿನ ಫ್ರಿಡಂಪಾರ್ಕ್‌ನಲ್ಲಿ ನಡೆದ ಪ್ರತಿಭಟನೆಯಲ್ಲಿ ಆಂದೋಲನ ಆರಂಭಿಸಲಾಯಿತು. ರಾಹುಲ್‌ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಭಾಗವಹಿಸಿದ್ದರು. ಗಾಂಧಿನಗರ ವಿಧಾನಸಭಾ ಕ್ಷೇತ್ರದಲ್ಲೂ ಮತಗಳ್ಳತನವಾಗಿದೆ ಎಂದು ಹೇಳಿದರು.

ಒಂದು ಕ್ಷೇತ್ರದಲ್ಲಿ 2.40 ಲಕ್ಷ ಮತಗಳಿದ್ದರೆ, ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕುವ ಅಲ್ಪಸಂಖ್ಯಾತರು, ದಲಿತರ ಮತಗಳನ್ನು ಪಕ್ಕದ ಕ್ಷೇತ್ರಕ್ಕೆ ಸ್ಥಳಾಂತರಿಸಿ ಅನ್ಯಾಯ ಮಾಡಲಾಗಿದೆ. ಚಿಲುಮೆ ಸಂಸ್ಥೆಯ ಹಗರಣವನ್ನು ಗಮನದಲ್ಲಿಟ್ಟುಕೊಂಡು ಚುನಾವಣಾಧಿಕಾರಿಗಳೇ ದೂರು ದಾಖಲಿಸಿದ್ದರು. ತನಿಖೆಯಾಗಿ ಕೆಲವರನ್ನು ಅಮಾನತುಗೊಳಿಸಲಾಗಿತ್ತು, ಕೆಲ ಸಮಯದ ನಂತರ ಕೆಲವರು ಕರ್ತವ್ಯಕ್ಕೆ ಮರಳಿದ್ದಾರೆ ಎಂದು ವಿವರಿಸಿದರು.

ಆಳಂದದಲ್ಲಿ ಪಿಡಿಒ ಹೆಣ್ಣುಮಗಳೊಬ್ಬರು ಮತಗಳ್ಳತನವನ್ನು ಪತ್ತೆ ಹಚ್ಚಿದ್ದರು. ಅಲ್ಲಿ ಜಿಲ್ಲಾಧಿಕಾರಿಯವರೇ ತನಿಖೆ ಮಾಡಿಸಿದ್ದರು. ಚುನಾವಣೆ ನಡೆಯುವ ದಿನ ಬೆಳಗಿನ ಜಾವ 4 ಗಂಟೆ ಸಮಯದಲ್ಲೂ ಕೆಲವರ ಹೆಸರನ್ನು ಕೈ ಬಿಡಲಾಗಿತ್ತು. 6100 ಮತದಾರರ ಹೆಸರನ್ನು ಕೈ ಬಿಡುವ ಪ್ರಯತ್ನಗಳಾಗಿತ್ತು. 256 ಬೂತ್‌ಗಳಲ್ಲಿ 7250 ಮತಗಳನ್ನು ಕೈ ಬಿಡಲು ಅರ್ಜಿ ಸಲ್ಲಿಕೆಯಾಗಿತ್ತು ಎಂದು ಹೇಳಿದರು.

ಜಿಲ್ಲಾಧಿಕಾರಿ ಸೇರಿ ಬಹುತೇಕ ಅಧಿಕಾರಿಗಳು ರಾಜ್ಯ ಸರ್ಕಾರದವರೇ ಆಗಿದ್ದರೂ ಚುನಾವಣಾ ಆಯೋಗದ ಅಧೀನವಾಗಿ ಕೆಲಸ ಮಾಡುತ್ತಾರೆ. ಆಳಂದ ಪ್ರಕರಣದಲ್ಲಿ ಎಸ್‌ಐಟಿ ತನಿಖೆ ನಡೆಯುತ್ತಿದೆ. ಹೊರ ರಾಜ್ಯದವರ ಫೋನ್ ನಂಬರ್ ಬಳಕೆ ಮಾಡಿ ಮತದಾರರ ಪಟ್ಟಿಯಲ್ಲಿ ಹೆಸರುಗಳನ್ನು ಡಿಲಿಟ್ ಮಾಡುವ ಪ್ರಯತ್ನ ನಡೆದಿದೆ. ಗರುಡ ಅಪ್ ಬಳಕೆ ಮಾಡಿ, ಉತ್ತರ ಪ್ರದೇಶ, ಹರಿಯಾಣ, ಬಿಹಾರ, ಜಾರ್ಖಂಡ್ ಮೂಲದ ವ್ಯಕ್ತಿಗಳ ಫೋನ್ ನಂಬರ್ ಬಳಕೆ ಮಾಡಿಕೊಂಡು ಮತದಾರರ ಪಟ್ಟಿಯಲ್ಲಿ ಹೆಸರು ಕೈ ಬಿಡಲು ಅರ್ಜಿ ಸಲ್ಲಿಸಲಾಗಿದೆ. ಚುನಾವಣಾ ಆಯೋಗ ಈ ಬಗ್ಗೆ ಯಾವುದೇ ಮಾಹಿತಿ ನೀಡುತ್ತಿಲ್ಲ. ಎಸ್‌ಐಟಿ ಪೊಲೀಸರು ತನಿಖೆ ನಡೆಸಿ ಹೊರ ರಾಜ್ಯದ 9 ಫೋನ್ ನಂಬರ್‌ಗಳನ್ನು ಪತ್ತೆ ಹಚ್ಚಿದ್ದಾರೆ. ಎಸ್‌ಐಟಿ ತನಿಖೆಯ ವೇಳೆ ಆಳಂದ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಸುಭಾಷ್ ಗುತ್ತೆದಾರ್ ಕೆಲ ದಾಖಲೆಗಳನ್ನು ಸುಟ್ಟು ಹಾಕಿರುವುದು ಪತ್ತೆಯಾಗಿದೆ. ಪ್ರತಿಯೊಂದು ಮತದ ಡಿಲಿಟ್ ಗೆ 80 ರೂಪಾಯಿ ದರ ನೀಡುತ್ತಿರುವುದಾಗಿ ತಿಳಿದು ಬಂದಿದೆ ಎಂದು ವಿವರಿಸಿದರು.

ರಾಹುಲ್ ಗಾಂಧಿ ಪ್ರಜಾಪ್ರಭುತ್ವ, ಸಂವಿಧಾನ ಉಳಿವಿಗೆ ಹೋರಾಟ ನಡೆಸುತ್ತಿದ್ದಾರೆ. ಇದು ಕಾಂಗ್ರೆಸ್ ಪಕ್ಷದ ಹೋರಾಟ ಮಾತ್ರವಲ್ಲ, ಜನರ ಆಂದೋಲನ. ಜನರ ಅಭಿಪ್ರಾಯಗಳನ್ನು ಚುನಾವಣಾ ಆಯೋಗಕ್ಕೆ ತಿಳಿಸಲು ದೇಶದ ಉದ್ದಗಲಕ್ಕೂ ಸಹಿ ಸಂಗ್ರಹ ಅಭಿಯಾನ ನಡೆಸಲಾಗಿತ್ತು. ಮುಖ್ಯಮಂತ್ರಿ ಹಾಗೂ ತಾವು ಇದರಲ್ಲಿ ಭಾಗವಹಿಸಿದ್ದೇವೆ. ರಾಜ್ಯದಲ್ಲಿ 1,12,41000 ಸಹಿ ಸಂಗ್ರಹಿಸಲಾಗಿದೆ. ಇದೇ ತಿಂಗಳ 10ರಂದು ದೆಹಲಿಗೆ ತಲುಪಿಸುತ್ತೇವೆ.

ದೆಹಲಿಯ ರಾಮಲೀಲಾ ಮೈದಾನದಲ್ಲಿ ಬೃಹತ್ ಕಾಂಗ್ರೆಸ್ ಸಮಾವೇಶವನ್ನು ಆಯೋಜಿಸಲು ತಯಾರಿಗಳಾಗಿವೆ. ಯಾರ್ಯಾರು ಏನೇನು ಮಾಡಿದ್ದಾರೆ ಎಂಬ ಸಂಪೂರ್ಣ ಮಾಹಿತಿ ತಮ ಬಳಿ ಇದೆ. ಸಹಿ ಸಂಗ್ರಹವನ್ನು ಬೂತ್ ಮಟ್ಟದಲ್ಲಿ ನಡೆಸಲಾಗಿದೆ. ದೇಶದಲ್ಲೆ ಕರ್ನಾಟಕ ಸಹಿ ಸಂಗ್ರಹದಲ್ಲಿ ಮೊದಲ ಸ್ಥಾನದಲ್ಲಿದೆ ಎಂದರು.ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ, ವಿಧಾನ ಪರಿಷತ್ ನ ಮುಖ್ಯ ಸಚೇತಕ ಸಲೀಂ ಅಹಮದ್, ಕೆಪಿಸಿಸಿ ಕಾರ್ಯಾಧ್ಯಕ್ಷ ಜಿ.ಸಿ.ಚಂದ್ರಶೇಖರ್, ಶಾಸಕರಾದ ಬಿ.ಶಿವಣ್ಣ, ಶ್ರಿನಿವಾಸ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ರಾಜೇಶ್ವರ ಗ್ರಾಮ ಪಟ್ಟಣ ಪಂಚಾಯತಿಯಾಗಿ ಮೇಲ್ದರ್ಜೆಗೆ: ಗ್ರಾಮಸ್ಥರ ಸಂಭ್ರಮ

**ಹುಮನಾನಾದ್: ನ.8**–ಮತಕ್ಷೇತ್ರ ವ್ಯಾಪ್ತಿಯ ರಾಜೇಶ್ವರ ಗ್ರಾಪಂ. ಪಟ್ಟಣ ಪಂಚಾಯತಿಯಾಗಿ ಮೇಲ್ದರ್ಜೆಗೇರಿಸಿದ್ದ, ಹಿನ್ನಲೆ ನಗರದ ಮಾಜಿ ಸಚಿವರ ಗೃಹ ಕಚೇರಿಯಲ್ಲಿ ಶುಕ್ರವಾರ ರಾಜೇಶ್ವರ ಗ್ರಾಮದ ಮುಖಂಡರು ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರಿಗೆ ಸನ್ಮಾನಿಸಿದರು.

ಬಳಿಕ ರಾಜೇಶ್ವರ ಗ್ರಾಮಸ್ಥರು ಮಾತನಾಡಿ, ರಾಜೇಶ್ವರ ಗ್ರಾಮ ಪಂಚಾಯತಿ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸುವ ನಮ್ಮ ಬಹುದಿನಗ ಬೇಡಿಕೆಯನ್ನು ಇದೀಗ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಈಡೇರಿಸಿದೆ. ರಾಜೇಶ್ವರ ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೇರಿಸಿದ ಎಲ್ಲ ಶ್ರೇಯಸ್ಸು ಮಾಜಿ



ಸಚಿವ ರಾಜಶೇಖರ ಪಾಟೀಲ್, ಎಂಎಲ್ಸಿ ಡಾ. ಚಂದ್ರಶೇಖರ ಪಾಟೀಲ್ ಹಾಗೂ ಎಂಎಲ್ಸಿ ಭೀಮರಾವ ಪಾಟೀಲ್ ಅವರಿಗೆ ಸಲ್ಲುತ್ತದೆ ಎಂದು ತಿಳಿಸಿದರು.

# ಸರ್ವೋದಯ ಶಿಕ್ಷಣ ಸಂಸ್ಥೆಯಲ್ಲಿ ಕನಕದಾಸರ ಜಯಂತಿ ಆಚರಣೆ



**ಮಾನ್ವಿ,ನ.8**– ತಾಲೂಕಿನ ಸರ್ವೋದಯ ಶಿಕ್ಷಣ ಸಂಸ್ಥೆಯಲ್ಲಿ ಶನಿವಾರದಂದು ಕನಕದಾಸರ ಜಯಂತಿಯನ್ನು ಕನಕದಾಸರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಆಚರಿಸಲಾಯಿತು. ಈ ಸಂದರ್ಭದಲ್ಲಿ ಸರ್ವೋದಯ ಕಾಲೇಜಿನ ಪ್ರಾಂಶುಪಾಲರು, ಉಪಾನ್ಯಸಕರು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಕನಕದಾಸರ ತತ್ವ, ಆದರ್ಶ ಪಾಲಿಸಿ : ಎಮ್ ಪ್ರವೀಣ್




**ಯುವ ಮಾರ್ಗ ಸುದ್ದಿ**

**ಮಾನ್ವಿ,ನ.8**– ತಾಲೂಕಿನ ಜನತಾ ಕಾಲೋನಿಯಲ್ಲಿ ಎಲ್ಲಾ ವರ್ಗದ ಯುವಕರಿಂದ ಭಕ್ತ ಕನಕದಾಸರ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಸಂಭ್ರಮದಿಂದ ಜಯಂತಿಯನ್ನು ಆಚರಿಸಲಾಯಿತು.

ಹಿಂದುಳಿದ ಜಾತಿಗಳ ಒಕ್ಕೂಟ ಅದ್ಯಕ್ಷರಾದ ಎಮ್ ಪ್ರವೀಣ್ ಕುಮಾರ್ ಅವರು ಮಾತನಾಡಿ ಸಾಮಾಜಿಕ ಮತ್ತು ಏಕತೆಗಾಗಿ 15ನೇ ಶತಮಾನದಲ್ಲಿ ಹೋರಾಡಿದವರು ಕನಕದಾಸರು ಅವರ ಮೌಲ್ಯಗಳು ಇಂದಿಗೂ ಪ್ರಸ್ತುತ, ಕನಕದಾಸರ ತತ್ವ ಮತ್ತು ಅದರ್ಶಗಳು ಎಲ್ಲಾರೂ ಪಾಲಿಸಬೇಕು. ಕನಕದಾಸರು ಹೇಳಿದಂತೆ ಸಮಾಜದಲ್ಲಿ ಎಲ್ಲಾರೂ ಒಂದಾಗಬೇಕು ಏಕತೆ ಬರಬೇಕು ಎಂಬ ಮಾರ್ಗದಲ್ಲಿ ನಾವು ನಡೆಯಬೇಕು ಎಂದು ಅವರು ಹೇಳೀದರು.

ಇದೇ ಸಂದರ್ಭದಲ್ಲಿ ಎಮ್ ವಿರೇಶ, ಎಮ್ ಹನುಮಂತ, ಎಮ್ ಈರಣ್ಣ, ಎಮ್ ಈರೇಶ, ಶಶಿ ಕುಮಾರ್ ಹೆಳವರ್, ಗೋಪಿ, ನಾಗರಾಜ, ಗಾದಿಲಿಂಗ, ಎಮ್ ರಮೇಶ, ನಿಂಗಣ್ಣ, ಸಾಯಿಬಣ್ಣ, ಶಿವುಕುಮಾರ,ಮಾರೂತಿ ಇನ್ನೂ ಅನೇಕರು ಇದ್ದರು.

# ಭಕ್ತ ಶ್ರೇಷ್ಠ ಕನಕದಾಸರ ಭಾವಚಿತ್ರ ಭವ್ಯ ಮೆರವಣಿಗೆಗೆ ಬಸವರಾಜ ಪಾಟೀಲ್ ಊಡಗಿ ಚಾಲನೆ




**ಸೇಡಂ, ನ, 08**– ಪಟ್ಟಣದ ಶ್ರೀ ಕೊತ್ತಲ ಬಸವೇಶ್ವರ ದೇವಾಲಯದಿಂದ ಸರ್ಕಾರಿ ನೌಕರ ಭವನದವರೆಗೆ ಭಕ್ತ ಶ್ರೇಷ್ಠ ಕನಕದಾಸರ ಜಯಂತ್ಯೋತ್ಸವ ಪ್ರಯುಕ್ತ ಕನಕದಾಸರ ಭಾವಚಿತ್ರ ಭವ್ಯ ಮೆರವಣಿಗೆಗೆ ಕೃಷಿಕ ಸಮಾಜದ ರಾಜ್ಯ ಪ್ರತಿನಿಧಿ ಬಸವರಾಜ ಪಾಟೀಲ್ ಊಡಗಿ ಅವರು ಚಾಲನೆ ನೀಡಿದರು. ಈ ವೇಳೆಯಲ್ಲಿ ಪರಮಪೂಜ್ಯ ಮರೇಪ್ಪ ತಾತಾನವರ, ಸಹಾಯಕ ಉಪಯೋಗ ಆಯುಕ್ತಾರಾದ ಪ್ರಭುರೆಡ್ಡಿ ತಹಶೀಲ್ದಾರ್ ಶ್ರೀಮತಿ ಶ್ರೇಯಾಂಕ್ ಎ.ಧನಶ್ರೀ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಿವಶರಣ ರೆಡ್ಡಿ ಪಾಟೀಲ,ಪುರಸಭೆ ಅಧ್ಯಕ್ಷ ವಿರೇಂದ್ರ ಪಾಟೀಲ್ ರುದ್ನೂರ, ಡಾ. ಪಂಡಿತ ಬಿಕೆ, ಕರ್ನಾಟಕ ಪ್ರದೇಶ ಕುರುಬರ ಸಂಘದ ತಾಲೂಕ ಅಧ್ಯಕ್ಷರಾದ ಸತೀಶಕುಮಾರ್ ಪುಜಾರಿ, ಇಓ ಚನ್ನಪ್ಪ ರಾಯಣ್ಣನವರ, ಸಿಪಿಐ ಮಹಾದೇವ ದಿಡ್ಡಿಮನಿ, ಕ್ಷೇತ್ರ ಶಿಕ್ಷಣಾಧಿಕಾರಿ ಮಾರುತಿ ಹುಜರಾತಿ,ಪಿಎಸ್ ಐ ಉಪೇಂದ್ರ ಕುಮಾರ್, ಸತ್ತರ ನಾಡೇಪಲ್ಲಿ, ವಸಂತಕುಮಾರ್ ಪೂಜಾರಿ, ಹಣಮಂತ ಪುಜಾರಿ, ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕನಕದಾಸರ ಜಯಂತಿ ಆಚರಣೆ



**ಕಾಳಗಿ : ನ.8**–ಪಟ್ಟಣದ ತಹಸೀಲ್ದಾರ ಕಾರ್ಯಾಲಯದಲ್ಲಿ ಕನಕದಾಸರ ಜಯಂತಿಯನ್ನು ತಾಲೂಕು ಆಡಳಿತದಿಂದ ಆಯೋಜನೆ ಮಾಡಲಾಯಿತು.

ತಾ.ಪಂ ಇಓ ಬಸಲಿಂಗಪ್ಪ ಡಿಗ್ಗಿ ಮಾತನಾಡಿ ಕುಲ ಕುಲ ಕುಲವೆಂದು ಹೊಡೆದಾಡದಿರಿ, ನಿಮ್ಮ ಕುಲದ ನೆಲೆ ಏನಾದರೂ ಬಲ್ಲಿರಾ? ಎಂದು ಹಾಡಿ ಜಾತ್ಯತೀತ ದಾರ್ಶನಿಕರಾಗಿ ಇತಿಹಾಸದಲ್ಲಿ ಅಚ್ಚಳಿಯದೇ ಉಳಿದಿದ್ದಾರೆ. ಅವರನ್ನು ಕೇವಲ ಒಂದು ಜಾತಿಗೆ ಸೀಮಿತವಾಗಿ ಮಾಡದೇ ಮನುಕುಲದ ಉದ್ಧಾರಕ ಎಂದು ಭಾವಿಸಬೇಕು ಎಂದರು.

ಗ್ರೇಡ್ 2 ತಹಸೀಲ್ದಾರ್ ರಾಜೇಶ್ವರಿ, ರೇವಣಸಿದ್ಧ ಅರಣಕಲ, ರೇವಣಸಿದ್ಧ ಸತಾನೂರ, ರೇವಣಸಿದ್ಧ ಸುಗುರ, ಪ್ರವೀಣ ಪೂಜಾರಿ, ದತ್ತು ಗುತ್ತೇದಾರ, ಪರಮೇಶ್ವರ ಕಟ್ಟಿಮನಿ, ಮಹೇಶ ಗುತ್ತೇದಾರ, ಪ್ರಭಾಕರ ಪಾಟೀಲ, ಸುನಿಲ ರಾಜಾಪುರ, ಬಲರಾಮ ವಲ್ಲ್ಯಾಪುರ, ಮೌನೇಶ ಪಂಚಾಳ ಸೇರಿದಂತೆ ಅನೇಕರಿದ್ದರು.

# ಕಂಪ್ಯೂಟರ್ ಶಿಕ್ಷಣ ಜೀವನದ ಅವಿಭಾಜ್ಯ




**ಹುಳಿಯಾರು, ನ. 8–** ಹುಳಿಯಾರು–ಕೆಂಕೆರೆ ಬಿ.ಎಂ.ಎಸ್. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಉದ್ಯೋಗಾವಕಾಶಗಳ ಕೋಶ ವತಿಯಿಂದ ಕಂಪ್ಯೂಟರ್ ಸಾಕ್ಷರತಾ ಕಾರ್ಯಕ್ರಮ ಉದ್ಘಾಟನಾ ಸಮಾರಂಭವನ್ನು ಕಾಲೇಜಿನ ಕಂಪ್ಯೂಟರ್ ಲ್ಯಾಬ್‌ನಲ್ಲಿ ಏರ್ಪಡಿಸಲಾಗಿತ್ತು.

ಗ್ರಾಮೀಣ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಜ್ಞಾನ ನೀಡುವ ಉದ್ದೇಶದಿಂದ ಕಳೆದ ಎರಡು ವರ್ಷಗಳಿಂದ ಕಾಲೇಜಿನಲ್ಲಿ ಉಚಿತ ಕಂಪ್ಯೂಟರ್ ಶಿಕ್ಷಣ ತರಗತಿಗಳನ್ನು ಯಶಸ್ವಿಯಾಗಿ ನಡೆಸಲಾಗುತ್ತಿದ್ದು, ಅದೇ ಯೋಜನೆಯ ಮುಂದುವರಿಕೆಯಾಗಿ 2025?26 ನೇ ಶೈಕ್ಷಣಿಕ ಸಾಲಿನ ತರಗತಿಗಳ ಉದ್ಘಾಟನೆ ನೆರವೇರಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲರಾದ ಪ್ರೊ. ವೀರಣ್ಣ ಎಸ್.ಸಿ. ಮಾತನಾಡಿ, ಜಾಗತೀಕರಣ ಮತ್ತು ಡಿಜಿಟಲೀಕರಣದ ಈ ಯುಗದಲ್ಲಿ ಕಂಪ್ಯೂಟರ್ ಶಿಕ್ಷಣವು ಜೀವನದ ಅವಿಭಾಜ್ಯ ಭಾಗವಾಗಿದೆ. ಇಂದಿನ ಕಾಲದಲ್ಲಿ ಯಾರಿಗಾದರೂ ಕಂಪ್ಯೂಟರ್ ಆಪರೇಟ್ ಮಾಡಲು ಬಾರದಿದ್ದರೆ ಅವರು ಅನಕ್ಷರಸ್ಥರಂತೆ ಕಾಣಬಹುದು. ಸರ್ಕಾರಿ ಕಚೇರಿಗಳಿಂದ ಹಿಡಿದು ಖಾಸಗಿ ವಲಯದವರೆಗೆ ಎಲ್ಲ ಕಾರ್ಯಪದ್ಧತಿಗಳು ಇಂದು ಡಿಜಿಟಲ್ ಆಗಿವೆ. ವಿದ್ಯಾರ್ಥಿಗಳು ಕಂಪ್ಯೂಟರ್ ಕೌಶಲ್ಯ ಗಳಿಸಿದರೆ ಮಾತ್ರ ಸ್ಪರ್ಧಾತ್ಮಕ ಯುಗದಲ್ಲಿ ತಮ್ಮ ಸ್ಥಾನವನ್ನು ಸ್ಥಿರಗೊಳಿಸಬಹುದು. ಈ ರೀತಿಯ ತರಬೇತಿ ತರಗತಿಗಳು ಗ್ರಾಮೀಣ ವಿದ್ಯಾರ್ಥಿಗಳಿಗೆ ಹೊಸ ದಾರಿಯನ್ನು ತೆರೆದು ಕೊಡುತ್ತವೆ ಎಂದು ಹೇಳಿದರು.

ಪ್ರಾಸ್ತಾವಿಕ ನುಡಿಗಳನ್ನಾಡಿದ ರಾಜ್ಯಶಾಸ್ತ್ರ ಉಪನ್ಯಾಸಕ ಮತ್ತು ತರಬೇತಿಕಾರರಾದ ತಿಪ್ಪೇಸ್ವಾಮಿ ಎಂ.ಕೆ. ಮಾತನಾಡಿ, ಡಿಜಿಟಲ್ ಯುಗಕ್ಕೆ ಹೊಂದಿಕೊಳ್ಳಲು ಕಂಪ್ಯೂಟರ್ ಶಿಕ್ಷಣ ಅತ್ಯವಶ್ಯಕ. ಪದವಿಯ ಜತೆಗೆ ಕಂಪ್ಯೂಟರ್ ಕೌಶಲ್ಯವೂ ಇಂದಿನ ಉದ್ಯೋಗ ಕ್ಷೇತ್ರದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹೇಳಿದರು.

ಐಕ್ಯೂಎಸಿ ಸಂಯೋಜಕ ಡಾ.ಸರಸ್ವತಿ ಕೆ.ಬಿ. ಮಾತನಾಡಿ, ಕಾಲೇಜು ನೀಡುತ್ತಿರುವ ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಿ. ಆಸಕ್ತಿಯಿಂದ ಕಲಿಯಿರಿ, ತಾಂತ್ರಿಕ ಜ್ಞಾನವೇ ನಿಮ್ಮ ಭವಿಷ್ಯ ನಿರ್ಮಾಣದ ಮೂಲವಾಗಲಿದೆ ಎಂದು ಸಲಹೆ ನೀಡಿದರು.ದೈಹಿಕ ಶಿಕ್ಷಣ ನಿರ್ದೇಶಕ ಡಾ. ಯೋಗೀಶ್ ಬಿ. ಮಾತನಾಡಿ, ಇದು ಅರ್ಥಪೂರ್ಣ ಮತ್ತು ಪ್ರಯೋಜನಕಾರಿ ಕಾರ್ಯಕ್ರಮ. ಮನಸ್ಸಿದ್ದರೆ ಮಾರ್ಗ ಸಿಗುತ್ತದೆ ಎಂಬ ಮಾತಿನಂತೆ, ವಿದ್ಯಾರ್ಥಿಗಳು ಮನಸ್ಸಿಟ್ಟು ಈ ತರಬೇತಿಯನ್ನು ಸಂಪೂರ್ಣವಾಗಿ ಉಪಯೋಗಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಉದ್ಯೋಗಾವಕಾಶಗಳ ಕೋಶದ ಸಂಯೋಜಕಿ ಲಕ್ಷ್ಮೀ ಎಸ್., ಕನ್ನಡ ವಿಭಾಗದ ಮುಖ್ಯಸ್ಥ ಪ್ರೊ. ಜಗದೀಶ್, ಕಾಲೇಜಿನ ಹಳೆಯ ವಿದ್ಯಾರ್ಥಿ ಭಾರತಿ, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಅರಣ್ಯ ಜಾಗೃತಿ ಚಿಣ್ಣರ ವನ ದರ್ಶನದ ಉದ್ದೇಶ



**ಮಧುಗಿರಿ, ನ. 8–** ಮುಂದಿನ ಪೀಳಿಗೆಗೆ ಅರಣ್ಯದ ಮಹತ್ವವನ್ನು ತಿಳಿಸುವುದೇ ಚಿಣ್ಣರ ವನ ದರ್ಶನ ಕಾರ್ಯಕ್ರಮದ ಮುಖ್ಯ ಉದ್ದೇಶ ಎಂದು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮಲ್ಲಿಕಾರ್ಜುನಪ್ಪ ಹೇಳಿದರು.

ಸಸ್ಯೋದ್ಯಾನದಲ್ಲಿ ಅರಣ್ಯ ಇಲಾಖೆ ವತಿಯಿಂದ ಸರ್ಕಾರಿ ಪ್ರೌಢಶಾಲೆಯ ಮಕ್ಕಳಿಗೆ ಏರ್ಪಡಿಸಿದ್ದ ಚಿಣ್ಣರ ವನದರ್ಶನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಈ ಕಾರ್ಯಕ್ರಮದಿಂದ ವನ್ಯ ಪ್ರಾಣಿಗಳ ಮಹತ್ವ ಅರಣ್ಯ ದಟ್ಟಣೆ ಹೆಚ್ಚಿಸುವ ಬಗ್ಗೆ ಪರಿಸರದ ಬಗ್ಗೆ ತಿಳಿದುಕೊಳ್ಳಬಹುದು ಎಂದು ತಿಳಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಹನುಮಂತರಾಯಪ್ಪ ಮಾತನಾಡಿ, ಪ್ರತಿ ವರ್ಷ ಸರ್ಕಾರಿ ಶಾಲಾ ಮಕ್ಕಳಿಗೆ ಅರಣ್ಯ ಇಲಾಖೆ ವತಿಯಿಂದ ಈ ಕಾರ್ಯಕ್ರಮ ನಡೆಸಲಾಗುತ್ತಿದ್ದು, ಪ್ರಸ್ತುತ ವರ್ಷ ಮಿಡಿಗೇಶಿ ಪ್ರೌಢಶಾಲೆಯ 50 ವಿದ್ಯಾರ್ಥಿಗಳಿಗೆ ಈ ಅವಕಾಶ ಕಲ್ಪಿಸಲಾಗಿದೆ. ಇಂತಹ ಕಾರ್ಯಕ್ರಮಗಳಿಂದ ವಿದ್ಯಾರ್ಥಿಗಳಿಗೆ ಅರಣ್ಯದ ಬಗ್ಗೆ ತಿಳುವಳಿಕೆ ಮೂಡಿಸಲು ಅರಣ್ಯ ಉಳಿಸುವ ಮತ್ತು ಬೆಳೆಸುವ ಬಗ್ಗೆ ಅರಿವು ಮೂಡಿಸಲು ಸಹಾಯಕಾರಿಯಾಗಲಿದೆ ಎಂದರು.

ಮಿಡಿಗೇಶಿ ಗ್ರಾಮ ಪಂಚಾಯ್ತಿ ಮಾಜಿ ಅಧ್ಯಕ್ಷ ಎಸ್.ಎನ್. ರಾಜು ಮಾತನಾಡಿ, ಚಿಣ್ಣರ ವನ ದರ್ಶನ ಕಾರ್ಯಕ್ರಮ ಮುಗಿದ ನಂತರ ನೆನಪಿಗಾಗಿ 50 ಸಸಿಗಳನ್ನು ಶಾಲಾ ಆವರಣದಲ್ಲಿ ನೆಡಲಾಗುವುದು. ಇದರಿಂದ ಮಕ್ಕಳಲ್ಲಿ ಸಸಿಗಳನ್ನು ನೆಟ್ಟು ಅದನ್ನು ಪೋಷಿಸುವ ಬಗ್ಗೆ ಅರಿವು ಮೂಡಿಸುವ ಉದ್ದೇಶ ಇದೆ ಎಂದರು.

ಈ ಸಂದರ್ಭದಲ್ಲಿ ವಲಯ ಅರಣ್ಯಾಧಿಕಾರಿ ಸುರೇಶ್, ಮಿಡಿಗೇಶಿ ಗ್ರಾಮ ಪಂಚಾಯ್ತಿ ಸದಸ್ಯ ವಿಜಯಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

# ಹೊಳಸಮುದ್ರ ಜಾತ್ರಾ ಮಹೋತ್ಸವದಲ್ಲಿ ಶಾಸಕ ಪ್ರಭು ಚವ್ಹಾಣ ಭಾಗಿ



**ಕಮಲನಗರ:ನ.8–** ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಕಮಲನಗರ ತಾಲ್ಲೂಕಿನ ಹೊಳಸಮುದ್ರ ಗ್ರಾಮದಲ್ಲಿ ನಡೆಯುತ್ತಿರುವ ಹರಿನಾಥ ಮಹಾರಾಜರ ಜಾತ್ರಾ ಮಹೋತ್ಸವದಲ್ಲಿ ನ.7ರಂದು ಪಾಲ್ಗೊಂಡರು.

ಸದ್ಗುರು ಹರಿನಾಥ ಮಹಾರಾಜರ ಸಮಾಧಿಗೆ ಪೂಜೆ ನೆರವೇರಿಸಿ ರೈತರ ಏಳಿಗೆ ಮತ್ತು ಔರಾದ(ಬಿ) ಕ್ಷೇತ್ರದ ಸಮೃದ್ಧಿಗಾಗಿ ಪ್ರಾರ್ಥನೆ ಸಲ್ಲಿಸಿದರು. ಇದೇ ವೇಳೆ ಭಜನಾ ಕಲಾವಿದರ ಜೊತೆಗೆ ಭಕ್ತಿ ಭಾವದಿಂದ ಹೆಜ್ಜೆ ಹಾಕಿ ಗಮನ ಸೆಳೆದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, ಶಾಂತಿ ಮತ್ತು ಸೌಹಾರ್ದತೆಯ ಪ್ರತಿಪಾದಕರಾಗಿದ್ದ ಹರಿನಾಥ ಮಹಾರಾಜರ ಮಹಿಮೆಗಳು ಅಪಾರ. ಕಷ್ಟವೆಂದು ಇಲ್ಲಿಗೆ ಬರುವ ಭಕ್ತರ ಇಷ್ಟಾರ್ಥಗಳು ತೀರುತ್ತವೆ. ಪೂಜ್ಯರ ಸಮಾಧಿಗೆ ನಮಿಸಿದರೆ ಒಳ್ಳೆಯದಾಗುತ್ತದೆ. ನೂರಾರು ವರ್ಷಗಳ ಇತಿಹಾಸ ಹೊಂದಿರುವ ಈ ಕ್ಷೇತ್ರಕ್ಕೆ ಲಕ್ಷಾಂತರ ಭಕ್ತರು ಆಗಮಿಸಿ ದರ್ಶನ ಪಡೆಯುತ್ತಾರೆ ಎಂದರು.

ನಾನು ಸದ್ಗುರು ಹರಿನಾಥ ಮಹಾರಾಜರ ಭಕ್ತನಾಗಿದ್ದು, ಪ್ರತಿ ವರ್ಷ ಜಾತ್ರಾ ಮಹೋತ್ಸವದಲ್ಲಿ ಬಂದು ಮಹಾರಾಜರ ಸನ್ನಿಧಿಗೆ ನಮಿಸುತ್ತೇನೆ. ಮೊದಲ ಚುನಾವಣೆಗೂ ಮುನ್ನ ಇಲ್ಲಿಗೆ ಭೇಟಿ ನೀಡಿದ್ದೆ. ಸದ್ಗುರು ಹರಿನಾಥ ಮಹಾರಾಜರ ಕೃಪೆ ಮತ್ತು ಕ್ಷೇತ್ರದ ಮಹಾಜನತೆಯ ಆಶೀರ್ವಾದದಿಂದ ಸಚಿವನಾಗಿ, ಶಾಸಕನಾಗಿ ಜನಸೇವೆ ಮಾಡಲು ಸಾಧ್ಯವಾಗಿದೆ. ಇಲ್ಲಿನ ಜನರು ಸಾಕಷ್ಟು ಪ್ರೀತಿ ನೀಡಿದ್ದಾರೆ. ಅದರಂತೆ ಹೊಳಸಮುದ್ರವನ್ನು ಸ್ವಂತ ಗ್ರಾಮವೆಂದು ಭಾವಿಸಿ ಕೆಲಸ ಮಾಡುತ್ತಿದ್ದೇನೆ ಎಂದರು.

ಗ್ರಾಮದ ಮುಖಂಡರಾದ ಅನಂತ ಕದಮ್ ಮಾತನಾಡಿ, ಸದ್ಗುರು ಹರಿನಾಥ ಮಹಾರಾಜರ ಪರಮ ಭಕ್ತರಾಗಿರುವ ಶಾಸಕರು ದೇವಸ್ಥಾನ ಮತ್ತು ಗ್ರಾಮದ ಅಭಿವೃದ್ಧಿಗೆ ಸಾಕಷ್ಟು ಕೆಲಸ ಮಾಡಿದ್ದಾರೆ. ಗ್ರಾಮವನ್ನು ಸುವರ್ಣ ಗ್ರಾಮ ಯೋಜನೆಯಡಿ ಆಯ್ಕೆ ಮಾಡಿ ನಾನಾ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ, ಮಂದಿರದಲ್ಲಿ ಶೆಡ್ ಹಾಗೂ ಮತ್ತಿತರೆ ಕೆಲಸಗಳನ್ನು ಮಾಡಿದ್ದಾರೆ.

ಗ್ರಾಮದಲ್ಲಿ ಶಾಲೆ, ಆಸ್ಪತ್ರೆ, ಪಶು ಆಸ್ಪತ್ರೆ, ರಸ್ತೆ, ಬ್ಯಾರೇಜ್‌ಗಳ ನಿರ್ಮಾಣ, ಶಿವಾಜಿ ಮಹಾರಾಜರ ಪ್ರತಿಮೆ ನಿರ್ಮಾಣಕ್ಕೆ ಸಹಕಾರ ಸೇರಿದಂತೆ ಗ್ರಾಮಸ್ಥರ ಎಲ್ಲ ಬೇಡಿಕೆಗಳನ್ನು ಈಡೇರಿಸಿದ್ದಾರೆ. ಹೊಳಸಮುದ್ರ– ಕೊಟಗ್ಯಾಳ ಮತ್ತು ಹೊಳಸಮುದ್ರ–ಅಶೋಕನಗರ ರಸ್ತೆಗಳನ್ನು ನಿರ್ಮಿಸುವುದು ಅತ್ಯಂತ ಅವಶ್ಯಕತೆಯಿದೆ ಎಂದು ಶಾಸಕರ ಗಮನಕ್ಕೆ ತಂದರು.

ಗ್ರಾಮಸ್ಥರ ಮನವಿಗೆ ಸ್ಪಂದಿಸಿದ ಶಾಸಕರು, ಸದ್ಗುರು ಹರಿನಾಥ ಮಹಾರಾಜರ ಮಂದಿರ ಹಾಗೂ ಗ್ರಾಮದ ಸಮಗ್ರ ಅಭಿವೃದ್ಧಿಗೆ ನಿರಂತರ ಕೆಲಸ ಮಾಡುತ್ತಿದ್ದು, ಗ್ರಾಮಸ್ಥರ ಎಲ್ಲ ಬೇಡಿಕೆಗಳನ್ನು ಹಂತ ಹಂತವಾಗಿ ಈಡೇರಿಸುವೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಧೊಂಡಿಬಾ ನರೋಟೆ, ಕಿರಣ ಪಾಟೀಲ, ಬಾಬುರಾವ ತೋರ್ಣಾವಾಡಿ, ಶಿವಾನಂದ ವಡ್ಡೆ, ನಾಗೇಶ ಪತ್ರೆ, ಸಂತೋಷ ಸೋಲಾಪೂರೆ, ಪ್ರವೀಣ ಕಾರಬಾರಿ, ಉದಯ ಸೋಲಾಪೂರೆ, ಬಂಟಿ ರಾಂಪೂರೆ, ಪವನ ನಿಡೋದಾ, ಭರತ ಕದಂ, ಅಶೋಕ ಮೇತ್ರೆ, ರಾಹುಲ ಪಾಟೀಲ, ವಿಷ್ಣು,ಮಾರುತಿ ಅಳಂದೆ, ಅನೀಲ ಶಿಂಧೆ, ಜ್ಞಾನೇಶ್ವರ ಪಾಟೀಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಭಾರತ ಅಭಿವೃದ್ಧಿ ಹಾದಿಯಲ್ಲಿ ವೇಗವಾಗಿ ಸಾಗುತ್ತಿದೆ: ಮೋದಿ



**ವಾರಣಾಸಿ, ನ. 8–** ವಿಶ್ವದಾದ್ಯಂತ ಅಭಿವೃದ್ಧಿ ಹೊಂದಿದ ದೇಶಗಳ ಆರ್ಥಿಕ ಬೆಳವಣಿಗೆಯಲ್ಲಿ ಮೂಲಸೌಕರ್ಯವು ಪ್ರಮುಖ ಅಂಶವಾಗಿದೆ ಮತ್ತು ಭಾರತವು ಅಭಿವೃದ್ಧಿಯ ಹಾದಿಯಲ್ಲಿ ವೇಗವಾಗಿ ಸಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ತಮ್ಮ ಲೋಕಸಭಾ ಕ್ಷೇತ್ರವಾದ ವಾರಣಾಸಿಯ ಬನಾರಸ್ ರೈಲು ನಿಲ್ದಾಣದಿಂದ ನಾಲ್ಕು ಹೊಸ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೆ ಹಸಿರು ನಿಶಾನೆ ತೋರಿಸಿದ ನಂತರ ಪ್ರಧಾನಿ ಮಾತನಾಡುತ್ತಿದ್ದರು.

ಪ್ರಪಂಚದಾದ್ಯಂತ ಅಭಿವೃದ್ಧಿ ಹೊಂದಿದ ದೇಶಗಳಲ್ಲಿ, ಆರ್ಥಿಕ ಬೆಳವಣಿಗೆಗೆ ದೊಡ್ಡ ಕಾರಣವೆಂದರೆ ಅವುಗಳ ಮೂಲಸೌಕರ್ಯ. ಪ್ರಮುಖ ಪ್ರಗತಿಯನ್ನು ಸಾಧಿಸಿದ ಪ್ರತಿಯೊಂದು ರಾಷ್ಟ್ರದಲ್ಲೂ, ಅದರ ಹಿಂದಿನ ಪ್ರೇರಕ ಶಕ್ತಿ ಮೂಲಸೌಕರ್ಯ ಅಭಿವೃದ್ಧಿಯಾಗಿದೆ ಎಂದು ಮೋದಿ ಹೇಳಿದರು. ಮೂಲಸೌಕರ್ಯವು ಕೇವಲ ದೊಡ್ಡ ಸೇತುವೆಗಳು ಮತ್ತು ಹೆದ್ದಾರಿಗಳ ಬಗ್ಗೆ ಅಲ್ಲ. ಅಂತಹ ವ್ಯವಸ್ಥೆಗಳನ್ನು ಎಲ್ಲಿಯಾದರೂ ಅಭಿವೃದ್ಧಿಪಡಿಸಿದಾಗಲೆಲ್ಲಾ, ಅದು ಆ ಪ್ರದೇಶದ ಒಟ್ಟಾರೆ ಅಭಿವೃದ್ಧಿಯನ್ನು ಪ್ರಚೋದಿಸುತ್ತದೆ ಎಂದು ಅವರು ಹೇಳಿದರು.

ಭಾರತದ ವೇಗದ ಪ್ರಗತಿಯನ್ನು ಒತ್ತಿಹೇಳುತ್ತಾ, ಪ್ರಧಾನಿಯವರು, ಹಲವು ವಂದೇ ಭಾರತ್ ರೈಲುಗಳು ಓಡುತ್ತಿವೆ ಮತ್ತು ಪ್ರಪಂಚದಾದ್ಯಂತದ ದೇಶಗಳಿಂದ ವಿಮಾನಗಳು ಆಗಮಿಸುತ್ತಿವೆ, ಈ ಎಲ್ಲಾ ಬೆಳವಣಿಗೆಗಳು ಈಗ ಬೆಳವಣಿಗೆಗೆ ಸಂಬಂಧಿಸಿವೆ. ಇಂದು, ಭಾರತವೂ ಈ ಹಾದಿಯಲ್ಲಿ ವೇಗವಾಗಿ ಸಾಗುತ್ತಿದೆ. ವಂದೇ ಭಾರತ್, ನಮೋ ಭಾರತ್ ಮತ್ತು ಅಮೃತ ಭಾರತ್ ನಂತಹ ರೈಲುಗಳು ಹೊಸ ಪೀಳಿಗೆಯ ಭಾರತೀಯ ರೈಲ್ವೆಗೆ ಅಡಿಪಾಯ ಹಾಕುತ್ತಿವೆ ಎಂದು ಅವರು ಹೇಳಿದರು.ತೀರ್ಥ ಯಾತ್ರೆಯ ಸ್ಥಳಗಳು ಆಧ್ಯಾತ್ಮಿಕತೆಯ ಕೇಂದ್ರಗಳಾಗಿವೆ ಮತ್ತು ಕಳೆದ 11 ವರ್ಷಗಳಲ್ಲಿ ಉತ್ತರ ಪ್ರದೇಶದಲ್ಲಿ ಮಾಡಲಾದ ಅಭಿವೃದ್ಧಿ ಕಾರ್ಯಗಳು ಅವುಗಳನ್ನು ಹೊಸ ಮಟ್ಟಕ್ಕೆ ಕೊಂಡೊಯ್ದಿವೆ ಎಂದು ಅವರು ಹೇಳಿದರು.

ಉತ್ತರ ಪ್ರದೇಶದ ಯಾತ್ರಾ ಸ್ಥಳಗಳಿಗೆ ಭೇಟಿ ನೀಡುವ ಭಕ್ತರು ರಾಜ್ಯದ ಆರ್ಥಿಕತೆಗೆ ಸಾವಿರಾರು ಕೋಟಿ ರೂಪಾಯಿಗಳನ್ನು ಕೊಡುಗೆ ನೀಡಿದ್ದಾರೆ ಎಂದು ಅವರು ಹೇಳಿದರು, ವಾರಣಾಸಿಗೆ ಭೇಟಿ ನೀಡುವುದು ಮತ್ತು ಇಲ್ಲಿ ಉಳಿಯುವುದನ್ನು ಎಲ್ಲರಿಗೂ ವಿಶೇಷ ಅನುಭವವನ್ನಾಗಿ ಮಾಡುವುದು ಸರ್ಕಾರದ ಪ್ರಯತ್ನವಾಗಿದೆ ಎಂದು ಅವರು ಹೇಳಿದರು.ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮತ್ತು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕೂಡ ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಹೊಸ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಬನಾರಸ್–ಖಜುರಾಹೊ, ಲಕ್ನೋ–ಸಹಾರನ್ಪುರ, ಫಿರೋಜ್ಪುರ–ದೆಹಲಿ ಮತ್ತು ಎರ್ನಾಕುಲಂ–ಬೆಂಗಳೂರು ಮಾರ್ಗಗಳಲ್ಲಿ ಕಾರ್ಯ ನಿರ್ವಹಿಸಲಿವೆ.ಅಧಿಕೃತ ಹೇಳಿಕೆಯ ಪ್ರಕಾರ, ಸೆಮಿ–ಹೈ–ಸ್ಪೀಡ್ ರೈಲುಗಳು ಪ್ರಮುಖ ನಿಲ್ದಾಣಗಳ ನಡುವಿನ ಪ್ರಯಾಣದ ಸಮಯವನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತದೆ, ಪ್ರಾದೇಶಿಕ ಚಲನಶೀಲತೆಯನ್ನು ಹೆಚ್ಚಿಸುತ್ತದೆ, ಪ್ರವಾಸೋದ್ಯಮವನ್ನು ಉತ್ತೇಜಿಸುತ್ತದೆ ಮತ್ತು ದೇಶಾದ್ಯಂತ ಆರ್ಥಿಕ ಚಟುವಟಿಕೆಯನ್ನು ಬೆಂಬಲಿಸುತ್ತದೆ.ಬನಾರಸ್–ಖಜುರಾಹೊ ವಂದೇ ಭಾರತ್ ವಾರಣಾಸಿ, ಪ್ರಯಾಗ್ರಾಜ್ ಮತ್ತು ಚಿತ್ರಕೂಟ ಸೇರಿದಂತೆ ಪ್ರಮುಖ ಸಾಂಸ್ಕೃತಿಕ ಮತ್ತು ಧಾರ್ಮಿಕ ತಾಣಗಳನ್ನು ಸಂಪರ್ಕಿಸುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ನೆಲದ ಹಿರಿಮೆ ಗರಿಮೆ ಸಾರುವ ಕವಿರಾಜ ಮಾರ್ಗ ಕೃತಿಯು ಕನ್ನಡಿಗರ ಅಸ್ಮಿತೆ: ಮುಡುಬಿ ಗುಂಡೇರಾವ



**ಕಲಬುರಗಿ:ನ.8–** ನೆಲದ ಹಿರಿಮೆ ಗರಿಮೆ ಸಾರುವ ಕನ್ನಡದ ಪ್ರಥಮ ಗ್ರಂಥ ಕವಿರಾಜಮಾರ್ಗ ಕೃತಿಯು ಕನ್ನಡಿಗರ ಅಸ್ಮಿತೆಯಾಗಿದೆ ಎಂದು ಸಂಸೋಧಕ ಸಾಹಿತಿ ಮುಡುಬಿ ಗುಂಡೇರಾವ ಅಭಿಮತವ್ಯಕ್ತಪಡಿಸಿದರು.

ಅವರು ತಾಲೂಕಿನ ನೀಲಹಳ್ಳಿ ಸರಕಾರಿ ಪ್ರೌಢ ಶಾಲೆಯಲ್ಲಿ ಕಲಬುರಗಿ ಬಸವೇಶ್ವರ ಸೇವಾ ಬಳಗ ಆಯೋಜಿಸಿದ ಕನ್ನಡ ರಾಜ್ಯೋತ್ಸವ ಮಾಸಾಚರಣೆ ಸರಣಿ ಉಪನ್ಯಾಸ(4) ಕಾರ್ಯಕ್ರಮದಲ್ಲಿ ಕನ್ನಡಕ್ಕೆ ಮುನ್ನುಡಿ ಬರೆದ ಕವಿರಾಜಮಾರ್ಗ ಕುರಿತು ಮಾತನಾಡುತ್ತಾ ಕನ್ನಡಿಗರ ಗುಣ ಸ್ವಭಾವ, ಶೌರ್ಯ, ಸಹಾಸ, ಕವಿಜನರ ಮಹತ್ವ, ನಮ್ಮ ನೆಲದ ಸೀಮಾರೇಖೆ ಸೇರಿದಂತೆ ಹಲವಾರು ವಿಷಯಗಳನ್ನು ಕವಿರಾಜಮಾರ್ಗ ಕೃತಿಯಲ್ಲಿ ಅಡಕವಾಗಿದೆ.

ರಾಷ್ಟ್ರಕೂಟರ ರಾಜಧಾನಿ ಮಾನ್ಯಖೇಟವು ಮತ್ತು ಮಹಾಮಾನವತಾವಾದಿ, ಪ್ರಜಾನುರಾಗಿ ದೊರೆ ಅಮೋಘವರ್ಷ ನೃಪತುಂಗ ಚಕ್ರವರ್ತಿಯು ತನ್ನ ಒಡ್ಡೋಲಗದಲ್ಲಿ ಕವಿ, ಕಲಾವಿದ, ಪಂಡಿತರಿಗೆ ರಾಜಾಶ್ರಯ ನೀಡಿ, ಪ್ರೋತ್ಸಾಹಿಸಿದ ಪರಿಣಾಮವಾಗಿ ಶ್ರೀವಿಜಯ, ಗುಣಾಢ್ಯ, ಮಹಾವೀರಚಾರ್ಯರು ಸೇರಿದಂತೆ ನೂರಾರು ಕವಿಗಳು ಹಲವಾರು ಕೃತಿಗಳು ಬರೆಯಲು ಸಾಧ್ಯ ವಾಗಿದೆ.

ಮಾನ್ಯಖೇಟ, ನೀಲಹಳ್ಳಿ, ಕೊಂಕನಹಳ್ಳಿ, ಸೇಡಂ ನೆಲದ ಪರಿಸರವು ಕನ್ನಡಮಯವಾಗಲು ಸಾಧ್ಯವಾಗಿದೆ. ಕನ್ನಡಕ್ಕೆ ಮುನ್ನುಡಿ ಬರೆದ ಸೇಡಂ– ಕಲಬುರಗಿ ನೆಲವೇ ಶ್ರೇಷ್ಠವಾಗಿದೆ. ಸಮಸ್ತ ಕನ್ನಡಿರು ಋಣಿಯಾಗಿರಲೇಬೇಕಾದ ಪವಿತ್ರ ನೆಲ ಮಾನ್ಯಖೇಟವು ಕನ್ನಡಿಗರ ಕಿರೀಟವಾಗಿದೆ ಎಂದರು.

ಬಳಗದ ಅಧ್ಯಕ್ಷ ಪ್ರೊ. ಎಚ್ ಬಿ ಪಾಟೀಲ ಮಾತನಾಡಿ ನವ್ಹೆಂಬರ ತಿಂಗಳಾದ್ಯಂತ ಜಿಲ್ಲೆಯಲ್ಲಿ ಕನ್ನಡ ಝೇಂಕಾರ ಮೊಳಗುವ ಸರಣಿ ಉಪನ್ಯಾಸ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದರು.

'ಕಾಳಗಿ ಕಸಾಪ ಅಧ್ಯಕ್ಷ ಸಂತೋಷ ಕುಡ್ಡಳ್ಳಿ ಮಾತನಾಡಿ ಪ್ರತಿಯೊಬ್ಬರೂ ಕನ್ನಡ ನಾಡು, ನುಡಿ ಅಭಿಮಾನ ಬಳಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆವಹಿಸಿದ್ದ ಮುಖ್ಯೋಪಾಧ್ಯಾಯಿನಿ ಸುರೇಖಾ ವಿ ಕುಲಕರ್ಣಿ ಮಾತನಾಡಿ ಮಕ್ಕಳಲ್ಲಿ ಕನ್ನಡ ಜಾಗೃತಿ ಮೂಡಿಸುತ್ತಿರುವ ಬಸವೇಶ್ವರ ಸೇವಾ ಬಳಗದ ಕಾರ್ಯ ಶ್ಲಾಘನೀಯ ಎಂದರು.

ರಂಗ ಗೀತೆ ಗಾಯನ ಮೂಲಕ ರಂಗಕರ್ಮಿ ಅಶೋಕ ತೊಟ್ನಳ್ಳಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಉತ್ತರ ವಲಯ ಕಸಾಪ ಗೌರವಾಧ್ಯಕ್ಷ ಶಿವಯೋಗೆಪ್ಪ ಬಿರಾದಾರ, ಶಾರದಾ ಪುರ್ಣಿಮಾ, ಶಿವಾನಂದ ಈಟೇಕಾರ, ಬಿಸ್ಮಿಲ್ಲಾ, ಕವಿತಾ ಗೋಡೇಕಾರ, ಸುನಿತಾ ದೇವಪುರ, ರೇಣುಕಾ ಎನ್ ಮುಂತಾದವರಿದ್ದರು.

# ಸರಸ್ವತಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ದೀಪಪೂಜನ




**ಬೀದರ :ನ.8–**ನಗರದ ಸರಸ್ವತಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರುವಾರ ದೀಪಪೂಜನ ಕಾರ್ಯಕ್ರಮವನ್ನು ಭಕ್ತಿಭಾವದಿಂದ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ಸರಸ್ವತಿ ಶಿಕ್ಷಣ ವಿಕಾಸ ಸಮಿತಿ ಇದರ ಸಹಕಾರ್ಯದರ್ಶಿ ಪೀರಪ್ಪಾ ಔರಾದ ಅವರು, "ಭಾರತವು ಸಂಸ್ಕೃತಿಯ ಮಹಾನ್ ಪರಂಪರೆಯನ್ನು ಹೊಂದಿದ ರಾಷ್ಟ್ರ. ಋಷಿ–ಮುನಿಗಳು ನೀಡಿದ ಜ್ಞಾನವೇ ನಮ್ಮ ದೇಶದ ನಿಜವಾದ ಸಂಪತ್ತು. ದೀಪವು ಅಂಧಕಾರವನ್ನು ದೂರ ಮಾಡಿ ಜ್ಞಾನವೆಂಬ ಬೆಳಕನ್ನು ಹರಡುವ ಸಂಕೇತ. ಮನೆಯೇ ಮೊದಲ ಪಾಠಶಾಲೆ, ಮಾತೆಯೇ ಮೊದಲ ಗುರು. ಸಮಾಜಕ್ಕೆ ಒಳ್ಳೆಯ ಪ್ರಜೆಗಳನ್ನು ರೂಪಿಸುವುದು ಮಹಿಳೆಯರ ಪಾತ್ರ," ಎಂದು ಹೇಳಿದರು.

ಅವರು ಮುಂದುವರೆದು "ದೇಶದ ಪ್ರಗತಿಗಾಗಿ ಸ್ವದೇಶಿ ವಸ್ತುಗಳ ಬಳಕೆ ಹೆಚ್ಚಿಸಬೇಕು. ಕುಟುಂಬ ಸಾಮರಸ್ಯವನ್ನು ಕಾಪಾಡಿ, ನಾವು ಎಲ್ಲರೂ ಒಂದೇ ಎಂಬ ಭಾವನೆ ಬೆಳೆಸಬೇಕು," ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಬೀದರ್ ಸಿದ್ಧಾರೂಢ ಮಠದ ಸಂಗೀತಾ ಮಾತಾಜಿ ಅವರು, "ಭಾರತದ ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದು ಶಾಲೆಗಳ ಕರ್ತವ್ಯ. ಮಕ್ಕಳಲ್ಲಿ ಸಂಸ್ಕಾರಗಳನ್ನು ನೆಡಲು ಪಾಲಕರುಮುಖ್ಯರು. ನಮ್ಮ ಭೂಮಿತಾಯಿ, ಕಾಮಧೇನು, ಗಂಗೆಯಂತೆ ಪವಿತ್ರವಾದ ದೇಶದಲ್ಲೇ ನಾವು ಬದುಕುತ್ತಿದ್ದೇವೆ," ಎಂದು ಹೇಳಿದರು.

ಕಾರ್ಯಕ್ರಮದ ವೇದಿಕೆಯಲ್ಲಿ ಸಂಸ್ಥೆಯ ಅಧ್ಯಕ್ಷ . ಎಸ್. ಬಿ. ಸಜ್ಜನಶೆಟ್ಟಿ, ಉಪಾಧ್ಯಕ್ಷ ಶ್ರೀ ನಾಗೇಶ ರೆಡ್ಡಿ, ಕೋಶಾಧ್ಯಕ್ಷ ಎನ್. ಕೃಷ್ಣಾರೆಡ್ಡಿ, ಆಡಳಿತ ಮಂಡಳಿಯ ಸದಸ್ಯರು ಶ್ರೀ ಶಿವಶರಣಪ್ಪ ಪಾಟೀಲ, ನಾರಾಯಣರಾವ್ ಮುಖೇಡ್ಕರ, ವೀರಶೆಟ್ಟಿ ಖ್ಯಾಮ ದಂಪತಿ ಉಪಸ್ಥಿತರಿದ್ದರು.ಕಾರ್ಯಕ್ರಮದಲ್ಲಿ 422ಕ್ಕೂ ಹೆಚ್ಚು ಮಾತೆಯರು ಭಾಗವಹಿಸಿದರು.ಸ್ವಾಗತ–ಪರಿಚಯ ಶ್ರೀಮತಿ ಸುಧಾ ಮೂಲಗೆ, ವೈಯಕ್ತಿಕ ಗೀತೆ ಶ್ರೀಮತಿ ಅಮೃತಾ ರಾಮೇಶ್ವರ ಸೋಲಂಕಿ, ವಂದನಾರ್ಪಣೆ ಶ್ರೀಮತಿ ಸುಜಾತ ಶಾಂತಕುಮಾರ, ನಿರೂಪಣೆ ಶ್ರೀಮತಿ ವೈಜಯಂತಿ ಪ್ರಕಾಶ ನೆರವೇರಿಸಿದರು.

ಯುವ ಮಾರ್ಗ

ಭಾನುವಾರ: 09-11-2025

ಚಿತ್ರ ಸುದ್ದಿ



ಮಾನ್ವಿ,ನ.8–ತಾಲೂಕಿನ ಕರೆ ಗುಡ್ಡ ಗ್ರಾಮದ ಶ್ರೀ ಮಹಾಂತ ಸ್ವಾಮಿಗಳ ಮಠದ ಅವರಣದಲ್ಲಿ ಶ್ರೀ.ಮಹಾಂತ ಸ್ವಾಮಿಗಳ ಉತ್ಸವ ಮೂರ್ತಿಯನ್ನು ಗ್ರಾಮದ ಪ್ರಮುಖ ಬೀದಿಗಳಲ್ಲಿ ಪಲ್ಲಕ್ಕಿ ಮೆರವಣಿಗೆ ಮೂಲಕ ಮಹಾ ರಥದಲ್ಲಿ ಕೂಡಿಸಿ ಸಾವಿರಾರು ಭಕ್ತರು ರಥೋತ್ಸವ ನೆರವೇರಿಸಿದರು ಶ್ರೀ ಮಠದ ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಸೇರಿದಂತೆ ಸಾವಿರಾರು ಭಕ್ತರು ಭಾಗವಹಿಸಿದ್ದರು.

# ನಕಲಿ ಬೀಜ ಮಾರಾಟ ಕ್ರಮಕ್ಕೆ ಆಗ್ರಹ

ಯುವ ಮಾರ್ಗ ಸುದ್ದಿ



**ಮಾನ್ವಿ,ನ.8–**ತಾಲೂಕಿನ ಅನೇಕ ರೈತರಿಗೆ ಈ ಬೆಳೆಗಾಲದಲ್ಲಿ ಆಂಧ್ರ ಪ್ರದೇಶ ಮೂಲದ ನೀಲಕಂಠೇಶ್ವರ ಸೀಡ್ಸ್ ಕಾರ್ಪೊರೇಷನ್ ಕಂಪನಿಯ ಕಳಪೆ ಹಾಗೂ ನಕಲಿ ಗುಣಮಟ್ಟದ ಭತ್ತದ ಬೀಜಗಳು ಮಾರಾಟವಾಗಿರುವ ಹಿನ್ನೆಲೆ ಯಲ್ಲಿ ಮಾನ್ವಿ ತಾಲೂಕಿನ ವಿವಿಧ ರೈತ ಸಂಘಟನೆಗಳು ಹಾಗೂ ಸಾಮಾಜಿಕ ಸಂಘಟನೆಗಳ ನೇತೃತ್ವದಲ್ಲಿ ಶುಕ್ರವಾರ ತಾಲೂಕು ಪಂಚಾಯತ್ ಆವರಣದಲ್ಲಿ ಭಾರಿ ಪ್ರತಿಭಟನೆ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜನಸೇವಾ ಫೌಂಡೇಶನ್ ರಾಜ್ಯಾಧ್ಯಕ್ಷರು ಹಾಗೂ ದಲಿತ ಸೇನೆ ಸಂಘಟನೆಯ ರಾಜ್ಯ ಸಂಘಟನಾ ಕಾರ್ಯದರ್ಶಿ ಡಾ. ಜಾವೀದ್ ಖಾನ್ ಅವರು, "ದೇಶದಲ್ಲಿ ರೈತನಿಗಿಂತ ದೊಡ್ಡ ವಿಜ್ಞಾನಿ ಯಾರೂ ಇಲ್ಲ. ಅನೇಕ ವರ್ಷಗಳ ಅನುಭವದಿಂದ ಕೃಷಿ ಮಾಡುವ ರೈತನಿಗೆ ನಕಲಿ ಬೀಜ ನೀಡಿ ಮೋಸ ಮಾಡುವುದು ಮಾನವೀಯತೆಯ ವಿರುದ್ಧದ ಕೃತ್ಯ. ಇಂತಹ ಕಂಪನಿಗಳಿಗೆ ಹೃದಯವೇ ಇಲ್ಲದಂತಾಗಿದೆ. ಮೊದಲು ನಮ್ಮ ಗಮನಕ್ಕೆ ಬಂದಾಗಲೇ ತಾಲೂಕು ಘಟಕದಿಂದ ತಹಸೀಲ್ದಾರ್ ಕಚೇರಿಗೆ ಮನವಿ ಸಲ್ಲಿಸಿದ್ದೇವೆ. ಬಳಿಕ ಕೃಷಿ ಇಲಾಖೆಯ ಎ.ಡಿ ಗುರುನಾಥ್ ಹಾಗೂ ಎ.ಓ ಅಮರೇಶ್ ಅವರು ರೈತರ ಜಮೀನುಗಳಿಗೆ ಭೇಟಿ ನೀಡಿ ನಷ್ಟ ಪರಿಶೀಲನೆ ನಡೆಸಿದರು. ಆದರೆ ಈ ತನಕ ಯಾವುದೇ ಸ್ಪಷ್ಟ ಕ್ರಮ ಕೈಗೊಳ್ಳದಿರುವುದು ವಿಷಾದನೀಯ," ಎಂದು ವಿಷಾದ ವ್ಯಕ್ತಪಡಿಸಿದರು.

ಅವರು ಮುಂದುವರಿದು, "ತಾಲೂಕಿನಲ್ಲಿ ಅನೇಕ ಕಂಪನಿಗಳು ಲೈಸೆನ್ಸ್ ನವೀಕರಣವಿಲ್ಲದೇ ಬೀಜ ಮಾರಾಟ ಮಾಡುತ್ತಿವೆ. ಕಾಳಸಂತೆಯಲ್ಲಿ ಅನಧಿಕೃತ ವ್ಯಾಪಾರ ನಡೆಯುತ್ತಿದೆ. ಅಧಿಕಾರಿಗಳ ಮೌನದಿಂದ ರೈತರು ತೀವ್ರ ನಷ್ಟಕ್ಕೆ ಒಳಗಾಗಿದ್ದಾರೆ. ನಕಲಿ ಬೀಜ ಮಾರಾಟ ಮಾಡಿದ ಕಂಪನಿಗಳ ವಿರುದ್ಧ ತಕ್ಷಣ ಕಾನೂನು ಕ್ರಮ ಕೈಗೊಳ್ಳಬೇಕು ಮತ್ತು ರೈತರಿಗೆ ಪರಿಹಾರ ನೀಡಬೇಕು. ಇಲ್ಲದಿದ್ದರೆ ಉಗ್ರ ಹೋರಾಟ ನಡೆಸಲಾಗುತ್ತದೆ," ಎಂದು ಎಚ್ಚರಿಸಿದರು.

ಈ ಪ್ರತಿಭಟನೆಯಲ್ಲಿ ದಲಿತ ಸೇನೆ ಜಿಲ್ಲಾಧ್ಯಕ್ಷ ಕೃಷ್ಣ ಮಾರ್ಷಲ್, ಉಪಾಧ್ಯಕ್ಷ ಹೊಳೆಯಪ್ಪ ಊಟಕನೂರು, ಜನಸೇವಾ ಫೌಂಡೇಶನ್ ತಾಲೂಕು ಅಧ್ಯಕ್ಷ ತಾಜುದ್ದೀನ್ ಚೀಕಲಪರ್ವಿ, ಹನುಮಂತ ಸೀಕಲ್, ಬಸವರಾಜ ನಾಯಕ, ಮಾರುತಿ ಚಿಕ್ಕಸೂಗೂರು, ನರಸಪ್ಪ ಜೂಕೂರು, ಸಿದ್ದರೆಡ್ಡಿ, ರಾಜಾ ಸಾಬ್ ನೀರಮಾನ್ವಿ, ಹಸನ್ ಚೀಕಲಪರ್ವಿ, ಮೌಲಾ ಸಾಬ್, ಗೋಕುಲ ಸಾಬ್, ಅಜೀತ್ ಸೇರಿದಂತೆ ನೂರಾರು ರೈತರು ಭಾಗವಹಿಸಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

# ಸಿಬಿಐ, ಐಟಿ, ಇಡಿ ಸೇರಿ ತನಿಖಾ ಸಂಸ್ಥೆಗಳು ಕೇಂದ್ರದ ಅಡಿಯಾಳು ಆಗಿವೆ : ಸಿಎಂ ಸಿದ್ದರಾಮಯ್ಯ



**ಬೆಂಗಳೂರು, ನ.8–** ಮಹಾರಾಷ್ಟ್ರ, ಕರ್ನಾ ಟಕ, ಹರಿಯಾಣದಲ್ಲಿ ಮತಗಳ್ಳತನ ನಡೆದಿ ದೆ. ಈಗ ಬಿಹಾರದಲ್ಲೂ ನಡೆಯುತ್ತಿದೆ. ಇಷ್ಟೆಲ್ಲಾ ನಡೆದರೂ ಚುನಾವಣಾ ಆಯೋ ಗ ತನಿಖೆ ನಡೆಸದೆ ಬೇಜವಾಬ್ದಾರಿಯಿಂದ ಉತ್ತರ ನೀಡುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದ್ದಾರೆ. ಪಕ್ಷದ ಕಚೇರಿಯಲ್ಲಿಂದು ಮತಗಳ್ಳತನದ ವಿರುದ್ಧ ನಡೆಯುತ್ತಿರುವ ಸಹಿ ಸಂಗ್ರಹ ಅಭಿಯಾನ ಕುರಿತು ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾತ ನಾಡಿದ ಅವರು, ಚುನಾವಣಾ ಆಯೋಗ ಕೇಂದ್ರ ಸರ್ಕಾರದ ಅಧೀನದಲ್ಲಿ ಕೆಲಸ ಮಾಡುತ್ತಿದೆ.

ನರೇಂದ್ರ ಮೋದಿ ಪ್ರಧಾನಿಯಾದ ಮೇಲೆ ಸ್ವತಂತ್ರ ಸಂಸ್ಥೆಗಳನ್ನು ನಾಶ ಪಡಿಸುತ್ತಿ ದ್ದಾರೆ. ಸಿಬಿಐ, ಆದಾಯ ತೆರಿಗೆ, ಇಡಿ ಸೇರಿ ತನಿಖಾ ಸಂಸ್ಥೆಗಳು ಸ್ವತಂತ್ರವಾಗಿ ಕೆಲಸ ಮಾಡಬೇಕಿತ್ತು. ಆದರೆ ಇವುಗಳನ್ನು ಕೇಂದ್ರ ಸರ್ಕಾರ ತನ್ನ ಅಡಿಯಾಳುವಿನಂತೆ ದುಡಿಸಿಕೊಳ್ಳುತ್ತಿದೆ. ಇದು ಪ್ರಜಾಪ್ರಭುತ್ವಕ್ಕೆ ಮಾರಕ ಎಂದರು. ಬಿಜೆಪಿಯವರು ಕೇವಲ ಸುಳ್ಳಿನಲ್ಲಿ ಮಾತ್ರವಲ್ಲ ಮತಗಳ್ಳತನದಲ್ಲೂ ನಿಸ್ಸೀಮರು ಎನ್ನುವುದು ಸಾಬೀತಾಗಿದೆ. ನಾವು ಇದನ್ನು ಸಹಿಸಲ್ಲ. ಪ್ರಜಾಪ್ರಭುತ್ವ ಮತ್ತು ಸಂವಿಧಾನದ ಮೌಲ್ಯ ಕಾಪಾಡಲು ಹೋರಾಟದ ಮಾರ್ಗ ಹಿಡಿಯುತ್ತೇವೆ ಎಂದರು.

ಬಿಜೆಪಿ ಮತಗಳ್ಳತನದ ಮೂಲಕ ಅನೇಕ ವಿಧಾನಸಭೆ ಮತ್ತು ಲೋಕಸಭೆ ಚುನಾವಣ 'ಗಳಲ್ಲಿ ಅಧಿಕಾರಕ್ಕೆ ಬಂದಿರುವುದು ಸ್ಪಷ್ಟ ವಾಗಿ ಗೊತ್ತಾಗಿದೆ. ಲೋಕಸಭೆ ವಿರೋಧ ಪಕ್ಷದ ನಾಯಕರಾದ ರಾಹುಲ್ ಗಾಂಧಿ ಯವರು ನಿರಂತರ ಅಧ್ಯಯನ, ತಪಾಸಣೆ ಬಳಿಕ ದಾಖಲೆ ಸಮೇತ ಮತಗಳ್ಳತನವನ್ನು ದೇಶದ ಜನರಿಗೆ ಮನವರಿಕೆ ಮಾಡಿಸಿ ದ್ದಾರೆ ಎಂದು ವಿವರಿಸಿದರು. ಸಂವಿಧಾನ ಬಾಹಿರವಾಗಿ ಅಧಿಕಾರ ಹಿಡಿಯುವುದು ಸಂವಿಧಾನಕ್ಕೆ ಎಸಗುವ ದ್ರೋಹ. ಪ್ರಜಾ ಪ್ರಭುತ್ವಕ್ಕೆ ಎಸಗಿದ ವಂಚನೆ. ರಾಹುಲ್ ಗಾಂಧಿಯವರು, ಬೆಂಗಳೂರು ಕೇಂದ್ರ ಲೋಕಸಭಾ ಚುನಾವಣೆಯಲ್ಲಿ ನಡೆದ ಮತಗಳ್ಳತನವನ್ನು ಸ್ಪಷ್ಟವಾಗಿ, ದಾಖಲೆ ಸಮೇತ ಬಯಲಿಗೆ ಎಳೆದು ದಾಖಲೆಗಳ ನ್ನು ದೇಶದ ಜನರ ಮುಂದೆ ಇಟ್ಟಿದ್ದಾರೆ. ಇಷ್ಟಾದರೂ ಚುನಾವಣಾ ಆಯೋಗ ನಾವು ಎತ್ತಿರುವ ಪ್ರಶ್ನೆಗಳಿಗೆ ಉತ್ತರಿಸುತ್ತಿಲ್ಲ, ದೇಶದ ಜನರ ಮುಂದೆ ಇರಿಸಿದ ದಾಖ ಲೆಗಳಿಗೂ ಉತ್ತರ ನೀಡುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಚುನಾವಣಾ ಆಯೋಗಕ್ಕೆ ಸ್ವತಂತ್ರ ಸಂಸ್ಥೆ ಯ ಸ್ಥಾನಮಾನವನ್ನು ಅಂಬೇಡ್ಕರ್ ಅವ ರು ಸಂವಿಧಾನದಲ್ಲಿ ನೀಡಿದ್ದಾರೆ. ಪ್ರಭುತ್ವ ಚುನಾವಣಾ ಪ್ರಕ್ರಿಯೆಯಲ್ಲಿ ಮೂಗು ತೂರಿಸಬಾರದು ಎನ್ನುವುದು ಅಂಬೇಡ್ಕರ್ ಅವರ ಸ್ಪಷ್ಟ ನಿಲುವಾಗಿತ್ತು.**(2ನೇ ಪುಟಕ್ಕೆ)**

ಅದಕ್ಕಾಗಿ ಮುಕ್ತ ಮತ್ತು ಪಾರದರ್ಶಕ ಚುನಾವಣಾ ವ್ಯವಸ್ಥೆಯನ್ನು ನಮ ಸಂವಿಧಾನ ರೂಪಿಸಿದೆ. ಸಂವಿಧಾನದ ಮೌಲ್ಯ ಉಳಿಯಬೇಕಾದರೆ ಸ್ವತಂತ್ರ ಚುನಾವಣಾ ಪ್ರಕ್ರಿಯೆ ನಡೆಯುವಂತೆ ನೋಡಿಕೊಳ್ಳುವುದು ಎಲ್ಲಾ ಪಕ್ಷಗಳ ಜವಾಬ್ದಾರಿ ಎಂದರು.

ಸಂವಿಧಾನ, ಪ್ರಜಾಪ್ರಭುತ್ವ ರಕ್ಷಣೆ ಹಾಗೂ ಸ್ವತಂತ್ರ ತನಿಖಾ ಸಂಸ್ಥೆಗಳನ್ನು ಉಳಿಸಲು ಸಹಿ ಸಂಗ್ರಹ ಅಭಿಯಾನ ನಡೆಯುತ್ತಿದೆ. ಈಗಾಗಲೇ 1.20 ಕೋಟಿ ಸಹಿ ಸಂಗ್ರಹವಾಗಿದೆ. ನವೆಂಬರ್ 10ರ ವರೆಗೂ ಸಹಿ ಸಂಗ್ರಹ ನಡೆಯಲಿದ್ದು, ಅನಂತರ ದೇಶದ ರಾಷ್ಟ್ರಪತಿ ಮತ್ತು ಕೇಂದ್ರ ಚುನಾವಣಾ ಆಯೋಗಕ್ಕೆ ಸಹಿ ಸಂಗ್ರಹವನ್ನು ಕಳುಹಿಸಲಾಗುದು. ಮುಂದೆಯೂ ಈ ಹೋರಾಟ ಮುಂದುವರೆಯಲಿದೆ ಎಂದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಹಿ ಸಂಗ್ರಹ ಒಳ್ಳೆಯ ಬೆಳವಣಿಗೆ. ಬಾಕಿ ಇರುವ ಮೂರು ದಿನಗಳಲ್ಲಿ ಇನ್ನಷ್ಟು ಹೆಚ್ಚು ಸಹಿ ಸಂಗ್ರಹ ಮಾಡುವಂತೆ ಶಾಸಕರಿಗೆ, ಸಚಿವರಿಗೆ, ಸಂಸದರಿಗೆ ಮುಖ್ಯಮಂತ್ರಿ ಸೂಚಿಸಿದರು. ಐದು ವರ್ಷಕ್ಕೊಮೆ ಪಡೆಯುವ ಜನಾದೇಶ ಮುಕ್ತ ಹಾಗೂ ನ್ಯಾಯ ಸಮತವಾಗಿರಬೇಕು ಎಂದರು.

ಕೆಪಿಸಿಸಿ ಅಧ್ಯಕ್ಷರಾದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರೂ ಸಚಿವರೂ ಆದ ಸತೀಶ್ ಜಾರಕಿಹೊಳಿ, ಪಕ್ಷದ ಕಾರ್ಯಾಧ್ಯಕ್ಷರಾದ ಜಿ.ಸಿ.ಚಂದ್ರಶೇಖರ್, ಸಲೀಂ ಅಹಮದ್, ಯುವ ಕಾಂಗ್ರೆಸ್ ರಾಜ್ಯಾಧ್ಯಕ್ಷರಾದ ಮಂಜುನಾಥ್ ಸೇರಿ ಪಕ್ಷದ ಮುಖಂಡರುಗಳು ಉಪಸ್ಥಿತರಿದ್ದರು.

# ಪತ್ರಕರ್ತನ ಮೇಲೆ ಹಲ್ಲೆ: ಕ್ರಮಕ್ಕೆ ಆಗ್ರಹ



**ಬೀದರ್:ನ.8–** ಗದಗ ನಗರದಲ್ಲಿ ಪತ್ರಕರ್ತನ ಮೇಲೆ ಹಲ್ಲೆ ನಡೆಸಿದವರ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಸ್ಯಾಟ್‌ಲೈಟ್ ಮೀಡಿಯಾ ಅಸೋಸಿಯೇಸ್ ಆಗ್ರಹಿಸಿದೆ.

ಅಸೋಸಿಯೇಷನ್ ಪದಾಧಿಕಾರಿಗಳು ನಗರದಲ್ಲಿ ಶುಕ್ರವಾರ ನಿಯೋಗದಲ್ಲಿ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರಿಗೆ ಬರೆದ ಮನವಿ ಪತ್ರವನ್ನು ಬೀದರ್ ಉಪ ವಿಭಾಗಾಧಿಕಾರಿ ಮುಹಮ್ಮದ್ ಶಕೀಲ್ ಅವರಿಗೆ ಸಲ್ಲಿಸಿದರು.

ಮತದಾರರ ಪಟ್ಟಿಗೆ ಅಕ್ರಮವಾಗಿ ಹೆಸರು ಸೇರ್ಪಡೆ ಮಾಡಲಾಗುತ್ತಿದೆ ಎಂಬ ಮಾಹಿತಿ ಹಿನ್ನೆಲೆಯಲ್ಲಿ ವರದಿ ಮಾಡಲು ಬಿಜೆಪಿಯ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅವರ ಜನ ಸಂಪರ್ಕ ಕಚೇರಿಗೆ ಹೋಗಿದ್ದ ನ್ಯೂಸ್ ಫಸ್ಟ್ ವರದಿಗಾರ ಸುರೇಶ್ ಕಡ್ಲಿಮಟ್ಟಿ ಅವರ ಮೇಲೆ ಹಲ್ಲೆ ನಡೆಸಲಾಗಿದೆ ಎಂದು ನಿಯೋಗದ ನೇತೃತ್ವ ವಹಿಸಿದ್ದ ಅಸೋಸಿಯೇಷನ್ ಅಧ್ಯಕ್ಷ ಮಲ್ಲಿಕಾರ್ಜುನ ಮರಕಲೆ ತಿಳಿಸಿದರು.

# ಗ್ರಾಮದ ಶಾಂತಿ ಸೌಹಾರ್ದತೆಗಾಗಿ ವಿಶೇಷ ಹೋಮ ಹವನ



ಯುವ ಮಾರ್ಗ ಸುದ್ದಿ

**ಅರಕೇರಾ,ನ.8–** ಸಮೀಪದ ಬಿ.ಗಣೇಕಲ್ ಗ್ರಾಮದ ಪ್ರಸಿದ್ಧವಾದ ಶ್ರೀ ಮಾರುತೇಶ್ವರ ದೇವಸ್ಥಾನದಲ್ಲಿ ಗ್ರಾಮದ ಸಮಸ್ತ ಭಕ್ತರಿಂದ ಲೋಕಕಲ್ಯಾಣಕ್ಕಾಗಿ ಮತ್ತು ಗ್ರಾಮದ ಶಾಂತಿ ಸೌಹಾರ್ದತೆಗಾಗಿ ಸಾಮೂಹಿಕವಾಗಿ ಶನಿವಾರ ಬೆಳಿಗ್ಗೆ ಶ್ರೀ ಮಾರುತೇಶ್ವರ ದೇವರಿಗೆ ಪಂಚಾಮೃತ ಅಭಿಷೇಕ, ಫಲ ಪಂಚಾಮೃತ ಅಭಿಷೇಕಗಳನ್ನು ನಡೆಸಿ ನಂತರ ಪವಮಾನ ಹೋಮ, ನವಗ್ರಹ ಗಣಪತಿ ಪೂಜೆ, ನೆರವೇರಿಸಲಾಯಿತು.

ಗ್ರಾಮದಲ್ಲಿ ಶಾಂತಿ, ನೆಮ್ಮದಿ ನೆಲೆಸಿ ಜನರ ಆರೋಗ್ಯ, ಸಮೃದ್ಧಿಯಾಗಿಲಿ ಎಂಬ ಅಪಾರ ನಂಬಿಕೆಯೊಂದಿಗೆ ಪೂಜೆಯಲ್ಲಿ ಪಂಡಿತರಾದ ತಿರುಪತಿ ಜೋಶಿ ಮುಂಡರಗಿ ಹಾಗೂ ತಿರುಮಲ ಆಚಾರಿ ರಾಜ ಪುರೋಹಿತ ಸಂಗಡಿಗರು ದೇವರಿಗೆ ಮಂತ್ರ, ಪಠಣಗಳ ಮೂಲಕ ಪೂಜೆಯನ್ನು ನೇರವೆರಿಸಿ ನವಗ್ರಹ ಗಣಪತಿ ಪೂಜೆ, ಪಂಚಾಮೃತ ಅಭಿಷೇಕ, ಮಂಗಳಾರತಿ ಹಾಗೂ ಅನ್ನ ಸಂತರ್ಪಣೆ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿತು.

ಹೋಮ ಪೂಜೆ ಕಾರ್ಯಕ್ರಮದಲ್ಲಿ ಶ್ರೀ ಮಾರುತೇಶ್ವರ ದೇವಸ್ಥಾನದ ಅರ್ಚಕರಾದ ಮುದುಕಣ್ಣ ಪೂಜಾರಿ, ನರಸಿಂಹ ಪೂಜಾರಿ, ಮಲ್ಲಯ್ಯ ಪೂಜಾರಿ, ಧರ್ಮಣ್ಣ ಪೂಜಾರಿ, ಗ್ರಾಮದ ಮುಖಂಡರಾದ ಶರಣಗೌಡ ಮಾಲೀ ಪಾಟೀಲ್, ಮಹೇಶಗೌಡ ಪಾಟೀಲ್, ಶಿವಣ್ಣ ದೊರೆ, ಬಾಲಯ್ಯ ದೊರೆ, ವೀರೇಶಗೌಡ ಮಾಲೀ ಪಾಟೀಲ್, ಬಸವರಾಜ ದಳವಾಯಿ, ಆಂಜಿನೇಯ್ಯ ಪೋ.ಪಾಟೀಲ್, ಸಿದ್ದಪ್ಪ ಮಕಾಶಿ, ರವಿಂದ್ರ ಗೊರ್ಲಿ, ಶಿವರಾಜ ಹುಲಿಗುಡ್ಡ, ಬಸವರಾಜ ದುರ್ಮಿಕಿ, ರಾಚಣ್ಣ ಅಭಕಾರಿ, ಶಾಂತಪ್ಪ ಸಾಹುಕಾರ ಅಂಗಡಿ, ಹಂಪಣ್ಣ ಪಲ್ಲೆದ್, ಬಸವರಾಜ.ಟಿ, ಮಲ್ಲಯ್ಯ ದಳವಾಯಿ, ಶಿವರಾಜ ಬಾಬೆ, ರಾಮಣ್ಣ ಭೋವಿ, ಶಿವರಾಜ ಕಂಬಾರ, ಎಚ್.ಎಸ್.ನಾಯಕ, ಅರುಣ ಕುಮಾರ ಹಾಗೂ ಊರಿನ ಮಹಿಳೆಯರು ಗ್ರಾಮದ ಸಕಲ ಸದ್ಭಕ್ತರು ಇದ್ದರು.

# ಎಲ್ಲರೊಂದಿಗೆ ಬೆರೆತು ಬಾಳುವ ಗುಣ ಶಿಕ್ಷಕರಲ್ಲಿದೆ: ರಮೇಶ ರಾಜೋಳೆ



**ಕಲಬುರಗಿ,ನ.8–**ಜೀವನದಲ್ಲಿ ಎಲ್ಲರ ಜೊತೆಗೂಡಿ ಬೆರೆತು ಬಾಳುವ ವ್ಯಕ್ತಿ ಜಗದೀಶ ಶುಕ್ಲಾರಾಗಿದ್ದಾರೆ ಎಂದು ಅಲಗೂಡ ಸರ್ಕಾರಿ ಪ್ರೌಢಶಾಲೆ ಮುಖ್ಯ ಗುರುಗಳಾದ ರಮೇಶ ರಾಜೋಳೆ ತಿಳಿಸಿದರು.

ಅವರು ಬಸವ ಕಲ್ಯಾಣ ತಾಲೂಕಿನ ಕೋಹಿನೂರ ಪಹಾಡ ಸರ್ಕಾರಿ ಉರ್ದು ಪ್ರೌಢಶಾಲೆಯಲ್ಲಿ ಮುಖ್ಯ ಗುರುಗಳಾಗಿ ಸೇವೆ ಸಲ್ಲಿಸಿ ನಿವೃತ್ತರಾದ ಜಗದೀಶ ಶುಕ್ಲಾರವರ ಬೀಳ್ಕೊಡುಗೆ ಸಮಾರಂಭದ ಮುಖ್ಯ ಅತಿಥಿಗಳಾಗಿ ಮಾತನಾಡಿದರು.ಮುಖ್ಯ ಗುರುಗಳಾದ ಸದಾನಂದ ಹಂದರಗಲ್, ವಿಜಯಲಕ್ಷ್ಮಿ ಹುಡುಗೆ , ಅಲ್ಲದೆ ತಾಜೋದ್ದೀನ ಖುರೇಶಿ ಮಾತನಾ ಡಿ, ಜಗದೀಶ ಶುಕ್ಲಾರವರ ಸೇವಾ ಮನೋ ಭಾವನೆ ಬಗ್ಗೆ ಪ್ರಶಂಸಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಜಗದೀಶ ಶುಕ್ಲಾ ಮಾತನಾಡಿ, ಎಲ್ಲರ ಸಹಕಾರದಿಂದ ಉತ್ತಮ ಸೇವೆ ಸಲ್ಲಿಸಿದ ತೃಪ್ತಿ ನನಗಿದೆ, ಸೇವೆಯಲ್ಲಿ ಅಹಂ ಭಾವನೆ ಬರಬಾರದು, ತಾಳ್ಮೆಯಿಂದ ಸೇವೆ ನಿರ್ವಹಿಸಿದೆ ಎಂದರು. ಅಧ್ಯಕ್ಷತೆಯನ್ನು ಶಾಲಾ ಪ್ರಭಾರಿ ಮುಖ್ಯೋಪಾಧ್ಯಾಯಿನಿ ಅಫಶಾನ್ ನಿಖತ್ ಮಾತನಾಡಿದರು. ಪ್ರೌಢಶಾಲಾ ಎಡಿಎಂಸಿ ಅಧ್ಯಕ್ಷರಾದ ಅಶ್ಫಾಕ್ ಬಾಬಾ, ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಜಿಂದಾಶಾ ಶಾಲೆಯ ಎಡಿಎಂಸಿ ಅಧ್ಯಕ್ಷರಾದ ಅಲಿ ಮೋದ್ದೀನ, ಮುಖ್ಯ ಗುರುಗಳಾದ ಅಬ್ದುರ್‌ರಬ್ ಸೇರಿದಂತೆ ಸುತ್ತಮುತ್ತಲಿನ ಶಾಲೆಯ ಮುಖ್ಯ ಗುರುಗಳು, ಅಭಿಮಾನಿಗಳು, ಶಿಕ್ಷಕರು ಭಾಗವಹಿಸಿದ್ದರು. ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದ ನಾಗಪ್ಪ ನಿಣ್ಣೆಯವರಿಗೆ ವಿಶೇಷವಾಗಿ ಸನ್ಮಾನಿಸಲಾಯಿತು.ಪ್ರಾಸ್ತಾವಿಕವಾಗಿ ಮಾತನಾಡಿದ ಶಿಕ್ಷಕ ರೇವಣಸಿದ್ದಪ್ಪ ಹೊಳಿಕೇರಿ ಅವರು ಪ್ರಾಮಾಣಿಕ, ನಿಷ್ಠೆಯಿಂದ ಶುಕ್ಲಾ ಸರ್ ಸೇವೆ ಸಲ್ಲಿಸಿದ್ದಾರೆ ಎಂದರು.

ಸ್ವಾಗತವನ್ನು ಶಿಕ್ಷಕರಾದ ಸಂಗಮೇಶ ಮಹಾಜನ,ಸಂಚಾಲನ 'ಯನ್ನು ಶಿಕ್ಷಕಿ ಬದ್ರುನ್ನೀಸಾ ಬೇಗಂ, ವಂದನಾರ್ಪಣೆ ಯನ್ನು ಅಫಶಾನ ರಾಹತ ಅವರಿಂದ ಜರುಗಿತು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111,9743496111

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H